ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ




ವಿಶ್ವದ ಆರನೇ ಕ್ರಮಾಂಕದ ಆಟಗಾರ ಚೌ ಟಿಯೆನ್ ಚೆನ್ ಅವರನ್ನು ಮೂರು ಗೇಮ್‌ಗಳ ಹೋರಾಟದಲ್ಲಿ ಸೋಲಿಸಿದ ಭಾರತದ ಲಕ್ಷ್ಯ ಸೇನ್ ಅವರು ಶನಿವಾರ ಆಸ್ಟ್ರೇಲಿಯನ್ ಓಪನ್ ಸೂಪರ್ 500 ಬ್ಯಾಡ್ಮಿಂಟನ್ ಟೂರ್ನಿಯ ಫೈನಲ್‌ಗೆ ಲಗ್ಗೆಯಿಟ್ಟರು.


23 ನವೆಂಬರ್ 2025 ಭಾನುವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 252 ಪುಟ-4 ಹಾಸನ E-mail : prajodayahsn@gmail.com RNI NO: KARKAN/2007/22629





ಭೌಮಸ್ವರ್ಗದಲ್ಲಿ ಸೀತೆಯನ್ನು ಹುಡುಕುವ ಚಿಂತೆ » 2





ಮಧ್ಯರಾತ್ರಿ ಚಂದ್ರ ತಳಿಯ ತುಂಬುತ್ತಿರುವುದು » 3





ಪ್ರತಿಭಾ ಕಾರಂಜಿಗೆ ಹೆಚ್ಚಿನ ಅನುದಾನ ನೀಡಲಿ » 4


# ಜೆಡಿಎಸ್ ಮತ್ತೊಮ್ಮೆ ತಲೆ ಎತ್ತಿ ನಿಲ್ಲಬೇಕು

## ಕುಮಾರಸ್ವಾಮಿ ನಾಯಕತ್ವ ಮುಂದುವರೆಯಲಿ | ಪಕ್ಷದ ರಜತ ಮಹೋತ್ಸವದಲ್ಲಿ ಹೆಚ್.ಡಿ.ದೇವೇಗೌಡ ಅಪೇಕ್ಷೆ

• ಪ್ರಜೋದಯ ವರದಿ

**ಬೆಂಗಳೂರು:** ಕುಮಾರಸ್ವಾಮಿ ನಾಯಕತ್ವದಲ್ಲಿ ಜೆಡಿಎಸ್ ಪಕ್ಷ ಮತ್ತೊಮ್ಮೆ ರಾಜ್ಯದಲ್ಲಿ ತಲೆ ಎತ್ತಿ ನಿಲ್ಲಬೇಕೆಂಬುದು ನನ್ನ ಆಕಾಂಕ್ಷೆ ಎಂದು ಮಾಜಿ ಪ್ರಧಾನಿ, ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಹೆಚ್.ಡಿ. ದೇವೇಗೌಡ ಅವರು ಹೇಳಿದರು.

ಜೆಡಿಎಸ್ ಪಕ್ಷಕ್ಕೆ 25 ವರ್ಷ ತುಂಬಿದ ಹಿನ್ನಲೆ ಜೆ.ಪಿ.ಭವನದ ಪಕ್ಷದ ಕಚೇರಿ ಆವರಣದಲ್ಲಿ ರಜತ ಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಾವು ಎನ್‌ಡಿಎ ಮೈತ್ರಿ ಕೂಟದಲ್ಲಿ ಇದ್ದೇವೆ. ಅದರಲ್ಲಿ ಏನೂ ಮುಚ್ಚು ಮರೆಯಿಲ್ಲ. ಕುಮಾರಸ್ವಾಮಿ ಅವರು ನಾಯಕತ್ವ ವಹಿಸಿ ಎರಡು ಬಾರಿ ಮುಖ್ಯಮಂತ್ರಿ ಆಗಿ ಅನುಭವ ಪಡೆದಿದ್ದಾರೆ. ಈ ರಾಜ್ಯದ ಮೂಲೆ ಮೂಲೆ ಬಗ್ಗೆ ತಿಳಿದುಕೊಂಡಿದ್ದಾರೆ. ಜನರ ಸಮಸ್ಯೆಗಳ ಬಗ್ಗೆ ಗೊತ್ತಿದೆ. ಹೀಗಾಗಿ ಅವರ ನಾಯಕತ್ವದಲ್ಲಿ ಮತ್ತೊಮ್ಮೆ ಜೆಡಿಎಸ್ ಈ ರಾಜ್ಯ, ರಾಷ್ಟ್ರದಲ್ಲಿ ತಲೆ ಎತ್ತಿ ನಿಲ್ಲಬೇಕೆಂದು ತಿಳಿಸಿದರು.

ದೇವೇಗೌಡರು ಮುಗಿದೇ ಹೋದರು ಎಂದು ಅನೇಕರು ತಿಳಿದುಕೊಂಡಿದ್ದಾರೆ. 93ನೇ ವಯಸ್ಸಿನಲ್ಲಿ ಧ್ವಜಾರೋಹಣ ಮಾಡಿದ್ದೇನೆ, ಪಕ್ಷಕ್ಕೆ ಹೋರಾಡುವ ಶಕ್ತಿ ನನಗಿದೆ. ದಿನಕ್ಕೆ ನಾಲ್ಕೈದು ಬಾರಿ ಡಯಾಲಿಸಿಸ್ ಮಾಡಿಸಿಕೊಳ್ಳುತ್ತೇನೆ, ಇದು ದೊಡ್ಡ ಸಮಸ್ಯೆ ಅಲ್ಲ. ಸವಿಸ್ತಾರವಾಗಿ ಮಾತನಾಡುವ ಶಕ್ತಿ ಪರಮಾತ್ಮ ಕೊಟ್ಟಿದ್ದಾನೆ. ಜೆಡಿಎಸ್ ತಲೆ ಎತ್ತಿ ನಿಲ್ಲುವಂತಾಗಬೇಕು ಎಂದರು.



**ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ**

ಯಾವ ಮುಖ್ಯಮಂತ್ರಿ ಇಂದು ಅಧಿಕಾರದಲ್ಲಿದ್ದಾರೋ ಅವರನ್ನು ಅಂದು ಉಪ ಮುಖ್ಯಮಂತ್ರಿ, ಹಣಕಾಸು ಮಂತ್ರಿಯನ್ನಾಗಿ ಮಾಡಿದ್ದೇನಾನು. ಜೊತೆಗೆ ಸಿದ್ದರಾಮಯ್ಯ ಅವರನ್ನು ಸಿಎಂ ಮಾಡೊಕ್ಕೂ ಮೂರು ಬಾರಿ ಸೋನಿಯಾ ಗಾಂಧಿ ಮನೆಗೆ ಹೋಗಿದ್ದೆ. ಈಗಲೂ ಸೋನಿಯಾಗಾಂಧಿ ಅವರ ಬಳಿ ಕೇಳಲಿ. ಜೆಡಿಎಸ್ ನಲ್ಲಿ ಇದ್ದಿದ್ದರೆ ಅಪ್ಪ, ಮಗ ಸಿಎಂ ಆಗಲು ಬಿಡುತ್ತಿರಲಿಲ್ಲ ಎನ್ನುತ್ತಾರೆ. ಆದರೆ ಆಗ ಸೋನಿಯಾ ಗಾಂಧಿ ಅವರು ಕಾಂಗ್ರೆಸ್‌ಗೆ ಮುಖ್ಯಮಂತ್ರಿ ಪಟ್ಟ ಕೊಡದಿದ್ದರೆ ಚುನಾವಣೆಗೆ ಹೋಗುತ್ತೇವೆ ಎಂದಿದ್ದರು ಎಂದು ಹಳೆಯದನ್ನು ನೆನಪಿಸಿದರು.


» ನಾಲ್ಕನೇ ಪುಟದಲ್ಲಿ


> ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪಕ್ಷದ ಸಂಘಟನೆಯಾಗಬೇಕು. ಜೆಡಿಎಸ್ ಅಧಿಕಾರಕ್ಕೆ ತರಬೇಕು ಅನ್ನೋದಕ್ಕಿಂತ ಇವತ್ತು ರಾಜ್ಯದ ರಾಜಕೀಯ ಹೇಗೆ ನಡೆಯುತ್ತಿದೆ ಎನ್ನುವುದರ ಬಗ್ಗೆ ಯೋಚಿಸಬೇಕು. ಈ ನಾಡಿನ ಮೇಲೆ ಸಾಲ ಹೊರಿಸಿದ್ದಾರೆ. ಜನ ಈ ಸರ್ಕಾರವನ್ನು ಕಿತ್ತೊಗೆಯ ಬೇಕು ಅಂತ ಕಾಯ್ತಾ ಇದ್ದಾರೆ. ಮುಂದಿನ 6-7 ತಿಂಗಳಲ್ಲಿ ಯಾರೂ ನಿರೀಕ್ಷಿಸದ ರೀತಿ ಬೆಳವಣಿಗೆಗಳು ರಾಜ್ಯದಲ್ಲಿ ಆಗುವ ಸಾಧ್ಯತೆಯಿದೆ.
>
> -ಹೆಚ್.ಡಿ.ಕುಮಾರಸ್ವಾಮಿ, ಜೆಡಿಎಸ್ ರಾಜ್ಯಾಧ್ಯಕ್ಷ, ಕೇಂದ್ರ ಸಚಿವ

**ರಾಜ್ಯಾಧ್ಯಕ್ಷರಾಗಿ ಹೆಚ್‌ಡಿಕೆ ಪುನರಾಯ್ಕೆ**

ಜೆಡಿಎಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾಗಿ ಹೆಚ್.ಡಿ.ದೇವೇಗೌಡ ಮತ್ತು ರಾಜ್ಯಾಧ್ಯಕ್ಷರಾಗಿ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಮುಂದುವರೆಸಲು ಜೆಡಿಎಸ್ ರಾಷ್ಟ್ರೀಯ ಕಾರ್ಯಕಾರಣಿ ಯಲ್ಲಿ ತೀರ್ಮಾನಿಸಲಾಯಿತು. ರಾಜ್ಯದ ನಾಯಕರು ಮಾತ್ರವಲ್ಲದೇ ಮಹಾರಾಷ್ಟ್ರ, ಕೇರಳ, ಬಿಹಾರ, ಉತ್ತರ ಪ್ರದೇಶ, ತಮಿಳುನಾಡು, ಪಶ್ಚಿಮ ಬಂಗಾಳದ ರಾಜ್ಯಾಧ್ಯಕ್ಷರು, ಕಾರ್ಯ ದರ್ಶಿಗಳು ಉಪಸ್ಥಿತರಿದ್ದರು. ರಜತ ಮಹೋತ್ಸವ ಸಂಭ್ರಮಾಚರಣೆ ಅಂಗವಾಗಿ ಆಕರ್ಷಣೆಯಾಗಿ ಪಕ್ಷದ ಚಿನ್ಹೆ ತೆನೆಹೊತ್ತ ರೈತ ಮಹಿಳೆ, ದೇವೇಗೌಡರು ಮತ್ತು ಕುಮಾರಸ್ವಾಮಿ ಅವರ ಚಿತ್ರಗಳು ಇರುವ ಬೆಳ್ಳಿ ನಾಣ್ಯ, ವಾಟ್ಸಪ್ ಲೈನ್ ನಂಬರ್ 9964002028 ಬಿಡುಗಡೆ ಮಾಡಲಾಯಿತು.

# ಮಲ್ಲಿಕಾರ್ಜುನ ಖರ್ಗೆ ಭೇಟಿಯಾದ ಸಿದ್ದರಾಮಯ್ಯ

• ಪ್ರಜೋದಯ ವರದಿ

**ಬೆಂಗಳೂರು:** ಮುಖ್ಯಮಂತ್ರಿ ಬದಲಾವಣೆ ಜೋರು ಚರ್ಚೆ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ರಾತ್ರಿ 8.30ಕ್ಕೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು.

ಪೂರ್ವ ನಿಗದಿಯಂತೆ ಸಚಿವ ಡಾ. ಸುಧಾಕರ್ ಅವರ ಪುತ್ರನ ವಿವಾಹ ಸಮಾರಂಭದಲ್ಲಿ ಭಾಗವಹಿಸಿ ನಂತರ ಸದಾಶಿವ ನಗರದ ಮಲ್ಲಿಕಾರ್ಜುನ ಖರ್ಗೆ ಅವರ ಮನೆಗೆ ತೆರಳಿ ಕೆಲ ಹೊತ್ತು ಮಾತುಕತೆ ನಡೆಸಿದರು. ರಾಜ್ಯ ಸರ್ಕಾರಕ್ಕೆ ಎರಡೂವರೆ ವರ್ಷ ಪೂರ್ಣಗೊಳ್ಳುತ್ತಿದ್ದಂತೆ ಮುಖ್ಯಮಂತ್ರಿ ಬದಲಾವಣೆ ವಿಚಾರ ಮಹತ್ವ ಪಡೆದಿದೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಬಲಿಗ ಸಚಿವ ಹಾಗು ಶಾಸಕರು ಮುಖ್ಯಮಂತ್ರಿ ಬದಲಾವಣೆಗೆ ಪಟ್ಟು ಹಿಡಿದಿದ್ದರೆ ಸಿದ್ದರಾಮಯ್ಯ ಬೆಂಬಲಿಗರು ತಮ್ಮದೇಯಾದ ರಣತಂತ್ರ ಹೆಣೆಯುತ್ತಿದ್ದಾರೆ.

ಈ ಕುರಿತು ಶನಿವಾರ ಸಂಜೆ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಡಿ.ಕೆ.ಶಿವಕುಮಾರ್, ನಾನು ಮಲ್ಲಿ ಕಾರ್ಜುನ ಖರ್ಗೆ ಅವರನ್ನು ಭೇಟಿ ಯಾಗುವ ಕುರಿತು ಯೋಚಿಸಿಲ್ಲ. ನಾಯಕತ್ವ ಬದಲಾವಣೆ ಕುರಿತು ನನಗೇನುಗೊತ್ತಿಲ್ಲ ವೆಂದರು. ಅದಕ್ಕೂ ಮೊದಲು ಕಾರ್ಯಕ್ರಮ ವೊಂದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಎದುರೇ ಮಾತನಾಡಿದ್ದ ಅವರು, ಮೀನಿಗೆ ಗಾಳ ಹಾಕಿ ಹಿಡಿಯುವ ಕಲೆ ನನಗೆ ಗೊತ್ತೆಂದು ಮಾರ್ಮಿಕವಾಗಿ ನುಡಿದಿದ್ದರು.

ಕಳೆದ ಎರಡ್ಮೂರು ದಿನಗಳಿಂದ ರಾಜ್ಯ ಕಾಂಗ್ರೆಸ್‌ನಲ್ಲಿ ನಡೆಯುತ್ತಿರುವ ಕ್ಷಿಪ್ರ ಬೆಳವಣಿಗೆಗಳು ಸಾಕಷ್ಟು ಕುತೂಹಲಕ್ಕೆ ಎಡೆಮಾಡಿಕೊಟ್ಟಿವೆ. ಸಿದ್ದರಾಮಯ್ಯ ಅವರು ಅಷ್ಟು ಸುಲಭಕ್ಕೆ ತಮ್ಮ ಸ್ಥಾನ ಬಿಟ್ಟುಕೊಡಲು ಸಿದ್ಧರಿಲ್ಲ, ಮತ್ತೊಂದೆಡೆ ಶಿವಕುಮಾರ್ ಸಹ ಪಟ್ಟು ಬಿಡುತ್ತಿಲ್ಲ. ಸದ್ಯದ ಬೆಳವಣಿಗೆಗಳು ಯಾವ ಮಟ್ಟಕ್ಕೆ ತಲುಪುತ್ತವೆ ಎಂಬುದನ್ನು ಕಾದು ನೋಡಬೇಕಿದೆ.



**ಸಿಎಂ ಭೇಟಿಯಾದ ಶಾಸಕರು**

ಅಧಿಕಾರ ಹಸ್ತಾಂತರ, ಸಂಪುಟ ಪುನರ್‌ರಚನೆ ಚರ್ಚೆ ಬಿರುಸು ಪಡೆದಿರುವ ಬೆನ್ನಲ್ಲೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸಚಿವರು, ಶಾಸಕರು ಭೇಟಿ ಮಾಡಿ ಚರ್ಚೆ ನಡೆ ಸುತ್ತಿರುವುದು ಕುತೂಹಲ ಮೂಡಿಸಿದೆ.
ಸಂಪುಟ ಪುನರ್ ರಚನೆಯಾದರೆ, ತಮ್ಮನ್ನು ಕೈಬಿಡಬಹುದೆಂಬ ಆತಂಕಕ್ಕೆ ಒಳಗಾಗಿರುವ ಮಂಕಾಳ ವೈದ್ಯ ಅವರು ಕಾವೇರಿ ನಿವಾಸದಲ್ಲಿ ಮುಖ್ಯ ಮಂತ್ರಿ ಅವರನ್ನು ಭೇಟಿ ಮಾಡಿ ಮಾಡಿದರು. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಶುಕ್ರವಾರ ಸಂಜೆ ಭೇಟಿ ಮಾಡಿದ್ದ ಶಾಸಕರಾದ ಸಿ.ಪಿ.ಯೋಗೇಶ್ವರ್, ಶ್ರೀನಿವಾಸ ಮಾನೆ, ಯಾಸಿರ್ ಪಠಾಣ್, ಸಂಗಮೇಶ್ ಅವರೂ ಮುಖ್ಯಮಂತ್ರಿ ಅವರನ್ನು ಭೇಟಿ ಮಾಡಿದರು.

## ವ್ಯಕ್ತಿ ಮೇಲೆ ಮಾರಣಾಂತಿಕ ಹಲ್ಲೆ

**ಚನ್ನರಾಯಪಟ್ಟಣ:** ಪತಿ ಜೊತೆ ಜಗಳವಾಡಿ ತವರಿಗೆ ಬಂದಿದ್ದ ತಮ್ಮ ತಾಯಿಯನ್ನು ವಾಪಾಸ್ ಕಳುಹಿಸುತ್ತಿಲ್ಲವೆಂದು ಆಕ್ರೋಶ ಗೊಂಡು ಇಬ್ಬರು ಪುತ್ರರು ಹಾಗು ಪತಿಯು ಆಕೆಯ ಸಹೋದರನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ತಾಲ್ಲೂಕಿನ ಸಬ್ಬನಹಳ್ಳಿ ಗ್ರಾಮದಲ್ಲಿ ನಡೆದಿದೆ.

ನಂಜೇಶ್‌ಕುಮಾರ್ ಗಂಭೀರ ಗಾಯ ಗೊಂಡಿದ್ದು ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿ ಸಲಾಗಿದೆ. ಪತಿ ಜೊತೆ ಜಗಳ ಮಾಡಿಕೊಂಡು ಲಲಿತ ತವರು ಮನೆಗೆ ಬಂದಿದ್ದರು. ನ.20 ರಂದು ವಾಪಾಸ್ ಕರೆದುಕೊಂಡು ಹೋಗಲು ಪತಿ ನರಸಿಂಹಮೂರ್ತಿ, ಮಕ್ಕಳಾದ ಪ್ರವೀಣ್ ಹಾಗು ಪ್ರಶಾಂತ್ ಬಂದಿದ್ದರು. ಎಷ್ಟೇ ಹೇಳಿದರೂ ಲಲಿತಾ ಗಂಡನ ಮನೆಗೆ ಬರಲು ಹಿಂದೇಟು ಹಾಕಿದ್ದರಿಂದ ಅಲ್ಲೇ ಇದ್ದ ನಂಜೇಶ್ ಕುಮಾರ್, ಬರಲು ಇಷ್ಟವಿಲ್ಲವೆಂದ ಮೇಲೆಕೆ ಒತ್ತಾಯಿ ಸುತ್ತೀರಿ ಎಂದಿದ್ದಾನೆ. ಅಷ್ಟಕ್ಕೆ ಸಿಟ್ಟಾದ ಮೂವರು ಸೇರಿ ಕುತ್ತಿಗೆಗೆ ಕೈ ಹಾಕಿ ಮೇಲಕ್ಕೆ ಎತ್ತಿ ನೆಲಕ್ಕೆ ಬಿಟ್ಟಿದ್ದಾರೆ. ಗಂಭೀರ ಗಾಯಗೊಂಡಿದ್ದ ನಂಜೇಶ್‌ಕುಮಾರ್ ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿಗೆ ಕರೆದೊಯ್ಯಲಾಯಿತು. ಹಿರೀಸಾವೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಡಿ.ಕೆ.ಶಿ. ನಿವಾಸದಲ್ಲಿ ಸಿದ್ದೇಶ್ವರಸ್ವಾಮಿ ಪಾದುಕೆ ಪೂಜೆ

## ರಾತ್ರೋರಾತ್ರಿ ಅರ್ಚಕರ ಕರೆಸಿಕೊಂಡ ಉಪಮುಖ್ಯಮಂತ್ರಿ | ಪ್ರಸಾದ ಫಲಿಸಿತೆಂದ ಅರ್ಚಕರು

• ಪ್ರಜೋದಯ ವರದಿ

**ಹಾಸನ:** ರಾಜ್ಯ ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಬದಲಾವಣೆ ಎಂಬ ಗಂಭೀರ ಚರ್ಚೆಗಳ ನಡುವೆಯೇ ಅರಸೀಕೆರೆ ತಾಲ್ಲೂಕಿನ ಜೇನುಕಲ್ ಸಿದ್ದೇಶ್ವರಸ್ವಾಮಿ ಪಾದುಕೆ ಪೂಜೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನಿವಾಸದಲ್ಲಿ ಶುಕ್ರವಾರ ರಾತ್ರಿ ನಡೆದಿದ್ದು ಕುತೂಹಲ ಕೆರಳಿಸಿದೆ.

ಈ ಹಿಂದೆ ಬಿ.ಎಸ್.ಯಡಿಯೂರಪ್ಪ ಅವರು ಸಿದ್ದೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದ್ದ ರಿಂದ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದರೆಂಬ ಪ್ರತೀತಿ ಇದೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಈಗ ಮುಖ್ಯಮಂತ್ರಿ ಸ್ಥಾನಕ್ಕಾಗಿ ಪೈಪೋಟಿ ನಡೆಸುತ್ತಿದ್ದಾರೆ. ಅಪಾರ ದೈವ ಭಕ್ತರಾಗಿರುವ ಶಿವಕುಮಾರ್ ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಸಿದ್ದೇಶ್ವರನ ಮೊರೆ ಹೋಗಿದ್ದಾರೆನ್ನಲಾಗಿದೆ.

**ಗಂಟೆಗೂ ಹೆಚ್ಚು ಕಾಲ ಪೂಜೆ**

ಸದಾಶಿವ ನಗರದ ನಿವಾಸದಲ್ಲಿ ಐವರು ಪೂಜಾರಿಗಳಿಂದ ಸುಮಾರು 1 ಗಂಟೆಗೂ ಹೆಚ್ಚು ಕಾಲ ಸಿದ್ದೇಶ್ವರಸ್ವಾಮಿ ಪಾದುಕೆಗೆ ವಿಶೇಷ ಪೂಜೆ ನೆರವೇರಿತು. ರಾತ್ರಿ 9.30ರ ಸುಮಾರಿಗೆ ಮನೆಗೆ ಜೇನುಕಲ್ಲು ಸಿದ್ದೇಶ್ವರ ಪಲ್ಲಕ್ಕಿ ವಾಹನ ಆಗಮಿಸಿತು. ಅರ್ಚಕ ಯತೀಶ್ ನೇತೃತ್ವದಲ್ಲಿ ಬಸವೇಶ್ವರ ಮೂರ್ತಿ ಹಾಗು ಸಿದ್ದೇಶ್ವರಸ್ವಾಮಿ ಪಾದುಕೆ ಪೂಜೆ ನೆರವೇರಿತು. ರಾತ್ರಿ 11ರ ಬಳಿಕ ಪಾದುಕೆ ಹೊತ್ತಿದ್ದ ವಾಹನ ವಾಪಾಸ್ಸಾಯಿತು.

**ಜು.26ಕ್ಕೆ ದೇಗುಲಕ್ಕೆ ಬಂದಿದ್ದ ಡಿ.ಕೆ.ಶಿ.**

ಅರಸೀಕೆರೆಯಲ್ಲಿ ಜು.26 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಹಮ್ಮಿಕೊಂಡಿದ್ದ ವಿವಿಧ ಅಭಿವೃದ್ಧಿ ಕಾಮಗಾರಿ ಉದ್ಘಾಟನೆ ಸಮಾ ರಂಭಕ್ಕೆ ಆಗಮಿಸಿದ್ದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಜೇನುಕಲ್ ಸಿದ್ದೇಶ್ವರ ಸ್ವಾಮಿ ಹಾಗು ಹಾರನಹಳ್ಳಿ ಕೋಡಿ ಮಠಕ್ಕೆ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿದ್ದರು. ಹರಕೆ ಹೊತ್ತವರು ಮನೆಗೆ ದೇವರನ್ನು ಕರೆಸಿ ಸಂಕಲ್ಪ ಮಾಡಿಸುವುದು ಇಲ್ಲಿನ ಸಂಪ್ರ ದಾಯ. ಹಾಗಾಗಿ ಡಿ.ಕೆ.ಶಿವಕುಮಾರ್ ಅವರು ಸಿದ್ದೇಶ್ವರಸ್ವಾಮಿ ಪಾದುಕೆಯನ್ನು ಕರೆಸಿಕೊಂಡಿದ್ದಾರೆ ಎನ್ನಲಾಗಿದೆ.



**ಸಂಕಲ್ಪ ಏನೆಂಬುದು ಗೊತ್ತಿಲ್ಲ**

ಡಿ.ಕೆ.ಶಿವಕುಮಾರ್ ಸಲ್ಲಿಸಿದ ವಿಶೇಷ ಪೂಜೆ ಕುರಿತು ಅರ್ಚಕರು ಮಾತನಾಡಿ, ಶ್ರೀ ಸಿದ್ದೇಶ್ವರ ಸ್ವಾಮಿಗೆ ಲಕ್ಷಾಂತರ ಭಕ್ತರಿದ್ದಾರೆ. ಡಿ.ಕೆ.ಶಿವಕುಮಾರ್ ಸಹ ಒಬ್ಬ ದೈವಭಕ್ತರು. ದಸರಾ ಸಂದರ್ಭದ ಒಂಬತ್ತು ದಿನ, ಹುಣ್ಣಿಮೆ ಹಾಗು ಜಾತ್ರೆ ಸಮಯ ಹೊರತು ಪಡಿಸಿ ಸಿದ್ದೇಶ್ವರ ಸ್ವಾಮಿ ಭಕ್ತರ ಮನೆಗೆ ಸಂಚರಿಸುತ್ತಾನೆ. ಯಾವುದೇ ಭಕ್ತರ ಮನೆಗೆ ದೇವರ ಪಾದುಕೆ ಕರೆದುಕೊಂಡು ಹೋಗ ಬೇಕೆಂದರೆ ಎರಡು ತಿಂಗಳ ಮೊದಲೇ ಚೀಟಿ ಬರೆಸಬೇಕು. ಡಿ.ಕೆ.ಶಿವಕುಮಾರ್ ಎರಡು ತಿಂಗಳ ಹಿಂದೆ ಚೀಟಿ ಬರೆಸಿದ್ದರು. ಅದರಂತೆ ಅವರ ಮನೆಯಲ್ಲಿ ಪೂಜೆ ನೆರವೇರಿದೆ. ಅವರು ಏನು ಸಂಕಲ್ಪ ಮಾಡಿಕೊಂಡಿದ್ದ ರೆಂಬುದು ಗೊತ್ತಿಲ್ಲ. ಸಂಕಲ್ಪ ಪೂಜೆ ಹಾಗು ಮಹಾಂಗಳಾರತಿ ಮಾಡಿ ಬಂದಿದ್ದೇವೆ. ಅವರಿಗೆ ಪ್ರಸಾದವಾಗಿದ್ದು ಇಷ್ಟಾರ್ಥ ಸಿದ್ಧಿಸು ತ್ತದೆಂದರು.

## ಗಾಳ ಹಾಕಿ ಮೀನು ಹಿಡಿಯುವುದು ಗೊತ್ತು: ಡಿ.ಕೆ.ಶಿ. ಮಾರ್ಮಿಕ ನುಡಿ

• ಪ್ರಜೋದಯ ವರದಿ



**ಬೆಂಗಳೂರು:** ಗಾಳ ಹಾಕಿ ಮೀನು ಹಿಡಿಯುವ ಕಲೆ ನನಗೆ ಗೊತ್ತಿದೆಯೆಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಾರ್ಮಿಕವಾಗಿ ಹೇಳಿದರು.

ವಿಶ್ವ ಮೀನುಗಾರಿಕೆ ದಿನಾಚರಣೆ ಅಂಗವಾಗಿ ಮೀನುಗಾರಿಕೆ ಇಲಾಖೆ ಆಯೋಜಿಸಿದ್ದ ಮತ್ಸ್ಯ ಮೇಳದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಎದುರೇ ಈ ರೀತಿ ಮಾತನಾಡಿದ್ದು ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಮೀನು ಎಂದರೆ ಲಕ್ಷ್ಮಿ. ರೈತರು ಭೂಮಿಯಲ್ಲಿ ಕೃಷಿ ಮಾಡಿದರೆ, ಮೀನು ಗಾರರು ನೀರಿನಲ್ಲಿ ಕೃಷಿ ಮಾಡುತ್ತಾರೆ. ನಿಮ್ಮ ಪ್ರಾಣವನ್ನು ಪಣಕ್ಕಿಟ್ಟು ಸಮುದ್ರದಲ್ಲಿ ಮೀನುಗಾರಿಕೆ ಮಾಡುತ್ತೀರಿ. ನಿಮಗೆ ಸೂರ್ಯ, ಚಂದ್ರ ಎರಡೇ ಕಾಣು ವುದು. ಉಳಿದಂತೆ ನಿಮ್ಮ ಆತ್ಮಬಲ ದಿಂದ ಅದನ್ನು ಮಾಡಿಕೊಂಡು ಬರುತ್ತಿದ್ದೀರಿ. ಮೀನು ಹಿಡಿಯುವುದು ಬೇರೆ, ಮಾರಾಟ ಮಾಡುವುದು ಬೇರೆ. ಮೀನುಗಾರನಿಗೆ ನಿತ್ಯ ಮೀನು ಸಿಗುವುದಿಲ್ಲ. ಕೆಲವೊಮ್ಮೆ ವಾರವಾದರೂ ಒಂದು ಮೀನು ಸಿಗುವುದಿಲ್ಲ. ಅಂತಹ ತಾಳ್ಮೆ ವೃತ್ತಿ ನಡೆಸುತ್ತಿರುವ ನೀವು ಶ್ರಮಜೀವಿಗಳು ಎಂದು ಮಾರ್ಮಿಕವಾಗಿ ಹೇಳಿದರು.

## ನ.24 ಕ್ಕೆ ಕೆ.ಡಿ.ಪಿ ಸಭೆ ಮುಂದೂಡಿಕೆ

**ಹಾಸನ:** ಶಾಸಕ ಸ್ವರೂಪ್ ಪ್ರಕಾಶ್ ಅವರ ಅಧ್ಯಕ್ಷತೆಯಲ್ಲಿ ನ.21ರಂದು ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಿಗದಿಪಡಿಸಲಾಗಿದ್ದ ಕೆ.ಡಿ.ಪಿ. ಸಭೆಯನ್ನು ಕಾರಣಾಂತರಗಳಿಂದ ನ.24ಕ್ಕೆ ಮುಂದೂಡಲಾಗಿದೆ ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

## ಸಂಚಾರಿ ನಿಯಮ ಉಲ್ಲಂಘನೆ: ಶೇ.50 ದಂಡ ರಿಯಾಯಿತಿ

• ಪ್ರಜೋದಯ ವರದಿ

**ಹಾಸನ:** ಸಂಚಾರಿ ನಿಯಮ ಉಲ್ಲಂಘನೆ ಮಾಡಿದ ಪ್ರಕರಣಗಳಿಗೆ ತಾತ್ಕಾಲಿಕ ಪರಿಹಾರವಾಗಿ ಶೇ.50ರಷ್ಟು ದಂಡ ಸಡಿಲಿಕೆ ಮಾಡಲಾಗಿದೆ. ದಂಡ ಪಾವತಿಗೆ ನಗರದ ಪ್ರಾದೇಶಿಕ ಸಾರಿಗೆ ಕಚೇರಿ(ಆರ್‌ಟಿಓ) ಯಲ್ಲಿ ವಿಶೇಷ ಕೌಂಟರ್‌ಗಳನ್ನು ತೆರೆಯಲಾಗಿದೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಜೆ.ಪಿ.ಪ್ರಕಾಶ ಅವರು ತಿಳಿಸಿದ್ದಾರೆ.

ಟ್ರಕ್, ಮ್ಯಾಕ್ಸಿ ಕ್ಯಾಬ್, ಬಸ್, ಆಟೋ ರಿಕ್ಷಾ, ಶೈಕ್ಷಣಿಕ ಸಂಸ್ಥೆಗಳ ವಾಹನಗಳು ಮತ್ತು ಇತರೆ ಸಾರಿಗೆ ವಾಹನಗಳ ಮಾಲೀಕರು ತಮ್ಮ ವಾಹನಗಳ ಮೇಲೆ ದಾಖಲಾಗಿರುವ ದಂಡವನ್ನು ಈಗ ಅರ್ಧ ಮೊತ್ತದಲ್ಲಿ ಪಾವತಿಸಿ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಬಹುದಾಗಿದೆ. ಸಾರ್ವಜನಿಕರು ಸಮಯ ಕಳೆಯದೆ ಇದರ ಪ್ರಯೋಜನ ಪಡೆದುಕೊಳ್ಳುವಂತೆ ಮನವಿ ಮಾಡಿದ್ದಾರೆ.

1991-92ರಿಂದ 2019-20ರ ಅವಧಿಯಲ್ಲಿ ಮೋಟಾರು ವಾಹನ ಕಾಯ್ದೆ ಮತ್ತು ನಿಯಮಗಳನ್ನು ಉಲ್ಲಂಘನೆ ಮಾಡಿ ದಾಖಲಾಗಿರುವ ಡಿಎಸ್‌ಎ ಇಲಾಖಾ ಶಾಸನ ಪ್ರಕರಣಗಳಿಗೆ ಮಾತ್ರ ಈ ರಿಯಾಯಿತಿ ಅನ್ವಯವಾಗಲಿದೆ. ರಿಯಾಯಿತಿ ಯೋಜನೆ ನ.21ರಿಂದ ಡಿ.12ರವರೆಗೆ ಜಾರಿಯಲ್ಲಿರಲಿದೆ. ಈ ಅವಧಿಯೊಳಗೆ ಮಾತ್ರ ಅರ್ಧ ದಂಡ ಪಾವತಿ ಸುವ ಅವಕಾಶ ಲಭ್ಯವಿರಲಿದೆ. ಬಳಿಕ ದಂಡವನ್ನು ಪೂರ್ಣ ಮೊತ್ತದಲ್ಲಿ ಪಾವತಿಸಬೇಕಾಗುತ್ತದೆಂದರು.

ಜನರು ತಮ್ಮ ವಾಹನಗಳ ಮೇಲೆ ಬಾಕಿ ಉಳಿದಿರುವ ದಂಡವನ್ನು ಈಗ ಅರ್ಧ ಮೊತ್ತದಲ್ಲಿ ಪಾವತಿಸಿ, ಇಲಾಖೆಯಿಂದ ಬರುವ ಮುಂದಿನ ಕ್ರಮಗಳನ್ನು ತಪ್ಪಿಸಿ ಕೊಳ್ಳುವ ಅವಕಾಶವನ್ನು ಕಳೆದುಕೊಳ್ಳ ಬಾರದು. ದಂಡದ ಮೊತ್ತವನ್ನು ಬಾಕಿ ಉಳಿಸಿಕೊಂಡಿರುವವರು ಈ ಅವಕಾಶ ಬಳಸಿಕೊಂಡು ಪಾವತಿ ಮಾಡುವಂತೆ ತಿಳಿಸಿದ್ದಾರೆ.

# ಬಟ್ಟೆ, ಕಾರು, ಕಟ್ಟಡದಲ್ಲಿ ಮನುಷ್ಯನ ಮೌಲ್ಯ ಅಳೆಯಲಾಗುತ್ತಿದೆ

• ಪ್ರಜೋದಯ ವರದಿ

**ಹಾಸನ:** ಇಂದಿನ ಆಧುನಿಕ ಯುಗದಲ್ಲಿ ಅನೇಕ ಜನರು ತಮ್ಮ ಅಸ್ತಿತ್ವವನ್ನೇ ಕಳೆದುಕೊಂಡಿದ್ದಾರೆ. ಮನುಷ್ಯನ ಮೌಲ್ಯವನ್ನು ಬಟ್ಟೆ, ಕಾರು, ಕಟ್ಟಡಗಳಲ್ಲಿ ಅಳೆಯಲಾಗುತ್ತಿದೆ. ತಾಯ್ತನದ ಮಹತ್ವವೂ ಮಸುಕಾಗುತ್ತಿರುವುದು ದೊಡ್ಡ ನಷ್ಟ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಚ್.ಎಲ್. ಮಲ್ಲೇಶಗೌಡ ಅವರು ಹೇಳಿದರು.

ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಪ್ರತಿಮಾ ಟ್ರಸ್ಟ್ ಸಹಯೋಗದಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿದ್ದ ಉಮೇಶ್ ತೆಂಕನಹಳ್ಳಿ ಅವರ ಅನುಭವದ ಅಂತರಾಳದ ಕೃತಿ ಕಪ್ಪು ಹಲ್ಲಿನ ಕತೆ ಕಾದಂಬರಿಯ ಎರಡನೇ ಅವೃತ್ತಿ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬದಲಾವಣೆಯ ಈ ಬಿರುಸಿನಲ್ಲಿ ಮನುಷ್ಯನ ಮನಸ್ಥಿತಿಯೇ ಬೇರ್ಪಟ್ಟಿದೆ. ಅನೇಕರು ಗ್ರಾಮೀಣ ಬದುಕಿನ ಮೌಲ್ಯಗಳನ್ನು ಅರಿಯದೇ ಬದುಕುತ್ತಿರುವುದು ವಿಷಾದನೀಯ ಎಂದರು.



ಗ್ರಾಮೀಣ ಭಾರತದ ನಿಜವಾದ ರೂಪ, ಅದರ ಬವಣೆಗಳು, ಮಣ್ಣಿನ ಸುಗಂಧ, ಜನರ ಸರಳತೆ ಮತ್ತು ಸಂತೋಷದ ಮಜಲುಗಳು ಇವೆಲ್ಲವನ್ನೂ ಹತ್ತಿರದಿಂದ ಕಂಡು ಬಂದಿರುವ ಹಿರಿಯರು ಇಂದು ನಾಗರಿಕತೆಯ ಹೊಸ ಹೊಳೆ ಮುಂದೆ ನಿಂತು ಆತಂಕ ವ್ಯಕ್ತಪಡಿಸಿದ್ದಾರೆ. ಒಮ್ಮೆ ಸಮಯ ನಿಧಾನವಾಗಿ ಸಾಗುತ್ತಿತ್ತು, ಬದಲಾವಣೆಗಳಿಗೆ ಗಾಢವಾದ ಅರ್ಥವಿತ್ತು. ಆದರೆ 2000ರ ಇಸವಿ ನಂತರ ನಮ್ಮ ಬದುಕಿನ ವೇಗವೇ ಬದಲುಗೊಂಡಿದೆ ಎಂದು ಹೇಳಿದರು.

ತಾಯಿ ಎಂಬ ಸ್ಥಾನವನ್ನು ಯಾರೂ ತುಂಬಲಾರರು. ಒಂದು ಕ್ಷಣದ ನಿರ್ಲಕ್ಷ್ಯಕ್ಕೂ ಮಗುವಿನ ಭವಿಷ್ಯ ಕತ್ತಲೆಯಾಗಬಹುದು. ಮನುಷ್ಯನನ್ನು ಮನುಷ್ಯನಾಗಿಸುವ ಮೊದಲ ಪಾಠ ತಾಯಿಯ ಮಮತೆಯಲ್ಲಿದೆ. ಪೂರ್ವಿಕರ ಬದುಕು ನೆನಪಿಸಿಕೊಂಡ ಅವರು, ಬದುಕನ್ನೇ ಆಟವಾಗಿ ಆಡುವ ಸಾಮರ್ಥ್ಯವಿಟ್ಟಿದ್ದರು. ಮಣ್ಣಿನ ನಡುವೆಯೇ ಜೀವನದ ಮೌಲ್ಯ ಕಂಡಿ ದ್ದರು. ನಾವು ನಾಗರೀಕರು ಆಟವನ್ನೇ ಮರೆಯುತ್ತಿದ್ದೇವೆ. ಮಣ್ಣಿನಿಂದ ದೂರವಾಗಿ, ಮನುಷ್ಯ ರಿಂದ ದೂರವಾಗಿ ಯಂತ್ರಗಳ ನಡುವೆ ಬದುಕುತ್ತಿದ್ದೇವೆಂದು ಆತಂಕ ವ್ಯಕ್ತಪಡಿಸಿದರು.

ಇಂದಿನ ಹಳ್ಳಿಗಳೂ ಹಳ್ಳಿ ಆಗಿ ಉಳಿದಿಲ್ಲ, ಭೂತಕಾಲದ ಸುಗಂಧ ಕಳೆದು, ಹೊಸ ಜಗತ್ತಿನ ಗೊಂದಲದ ಮಧ್ಯೆ ಮಕ್ಕಳು ಬೆಳೆದಿದ್ದಾರೆ.


» ನಾಲ್ಕನೇ ಪುಟದಲ್ಲಿ


## ಅಪಘಾತ: ಬೈಕ್ ಸವಾರ ಸಾವು

• ಪ್ರಜೋದಯ ವರದಿ

**ಸಕಲೇಶಪುರ:** ಬೈಕ್ ನಿಯಂತ್ರಣ ತಪ್ಪಿ ಕೆಳಗೆ ಬಿದ್ದ ಬೈಕ್ ಸವಾರ ಗಂಭೀರ ಗಾಯದಿಂದಾಗಿ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಬೆಳಗೋಡು ಹೋಬಳಿ ಕಟ್ಟೆಪುರ ಬಳಿ ಶುಕ್ರವಾರ ರಾತ್ರಿ ನಡೆದಿದೆ.

ಮೂಗಲಿ ಗ್ರಾಮದ ಮಂಜುನಾಥ್ (35) ಮೃತರು. ಬೆಳಗೋಡು ಕಡೆಯಿಂದ ಮೂಗಲಿ ಗ್ರಾಮದ ಕಡೆಗೆ ತೆರಳುತ್ತಿದ್ದ ವೇಳೆ ಬೈಕ್ ರಸ್ತೆ ಬದಿಯ ಕಲ್ಲಿಗೆ ಡಿಕ್ಕಿಯಾಗಿ ರಸ್ತೆಯ ಪಕ್ಕದ ಚರಂಡಿಯಲ್ಲಿ ಬಿದ್ದಿದ್ದಾನೆ. ರಾತ್ರಿ ಪೂರ್ತಿ ಗಾಯಗೊಂಡ ಸ್ಥಿತಿಯಲ್ಲಿ ಅಲ್ಲೇ ಬಿದ್ದಿದ್ದ ಮಂಜುನಾಥ್ ತೀವ್ರ ರಕ್ತಸ್ರಾವದಿಂದ ಪ್ರಾಣ ಕಳೆದು ಕೊಂಡಿದ್ದಾನೆಂದು ತಿಳಿದುಬಂದಿದೆ.

ಗ್ರಾಮಾಂತರ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮರಣೋತ್ತರ ಪರೀಕ್ಷೆಯ ನಂತರ ಮೃತ ದೇಹವನ್ನು ಸಂಬಂಧಿಕರಿಗೆ ಹಸ್ತಾಂತರಿಸಲಾಯಿತು.

# ಬ್ರೈನ್ ಟ್ಯೂಮರ್ ಮಾರಣಾಂತಿಕ ಕಾಯಿಲೆಯಲ್ಲ

## ಮಣಿಪಾಲ್ ಆಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ: ಡಾ.ಅನ್ಮೋಲ್

• ಪ್ರಜೋದಯ ವರದಿ



**ಹಾಸನ:** ಬ್ರೈನ್ ಟ್ಯೂಮರ್ ಮಾರಣಾಂತಿಕ ಕಾಯಿಲೆಯಲ್ಲ, ಬೆಂಗಳೂರಿನ ಯಶವಂತಪುರ ಮಣಿಪಾಲ್ ಆಸ್ಪತ್ರೆಯಲ್ಲಿ ಗುಣಮಟ್ಟದ ಚಿಕಿತ್ಸೆ ಲಭ್ಯವಿದೆ ಎಂದು ಸೀನಿಯರ್ ಕನ್ಸಲ್ಟೆಂಟ್ ನ್ಯೂರೋ ಸರ್ಜನ್ ಡಾ.ಅನ್ಮೋಲ್ ಅವರು ಹೇಳಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇಂದಿನ ವೈದ್ಯಕೀಯ ತಂತ್ರಜ್ಞಾನ, ನಿಖರ ಶಸ್ತ್ರ ಚಿಕಿತ್ಸೆಯಿಂದ ಬ್ರೈನ್ ಟ್ಯೂಮರ್ ಗುಣಪಡಿಸಬಹುದಾಗಿದೆ. ಮಣಿಪಾಲ್ ಆಸ್ಪತ್ರೆ ಒಂದೇ ಸೂರಿನಡಿ ವೈಯಕ್ತಿಕ ಚಿಕಿತ್ಸೆ, ಸ್ಟೀರಿ ಯೊಟ್ಯಾಕ್ಟಿಕ್ ರೇಡಿಯೋಸರ್ಜರಿ, ಲೇಸರ್ ಇಂಟರ್ ಸ್ಟ್ರೀಷಿಯಲ್ ಥೆರಪಿ ಮುಂತಾದ ತಂತ್ರಜ್ಞಾನದೊಂದಿಗೆ ಸಂಪೂರ್ಣ ನರ-ಆಂಕೋಲಜಿ ಆರೈಕೆ ಒದಗಿಸುತ್ತಿದೆ ಎಂದರು.

ಚಿಕಿತ್ಸೆಗಾಗಿ ವಿದೇಶಕ್ಕೆ ಹೋಗಬೇಕಿಲ್ಲ, ಕರ್ನಾಟಕದಲ್ಲೇ ವಿಶ್ವದರ್ಜೆಯ ಚಿಕಿತ್ಸೆ ನೀಡುವುದು ನಮ್ಮ ಗುರಿಯಾಗಿದೆ. ಯಾವುದೇ ರೀತಿಯ ಅಸಹಜ ಬದಲಾವಣೆ ಕಂಡರೂ ನಿರ್ಲಕ್ಷಿಸದೇ ತಕ್ಷಣ ವೈದ್ಯಕೀಯ ಸಲಹೆ ಪಡೆದು ಜೀವ ಉಳಿಸುವ ಅತ್ಯಂತ ಪ್ರಮುಖ ಹೆಜ್ಜೆಯಾಗಿದೆ. ಮೆದುಳು ಗೆಡ್ಡೆ ಇಂದಿನ ವೈದ್ಯಕೀಯ ತಂತ್ರಜ್ಞಾನದ ಪ್ರಗತಿಯೊಂದಿಗೆ ಪರಿಣಾಮಕಾರಿಯಾಗಿ ನಿರ್ವಹಿಸಬಹುದು. ರೋಗದ ಬಗ್ಗೆ ತಪ್ಪು ಗ್ರಹಿಕೆಗಳು, ವಿಶೇಷವಾಗಿ ಟಿಯರ್-2, ಟಿಯರ್-3 ನಗರಗಳಲ್ಲಿ ಸಮಯೋಚಿತ ಚಿಕಿತ್ಸೆಗೆ ನಮ್ಮ ಆಸ್ಪತ್ರೆಗೆ ಬದ್ಧವಾಗಿದೆ ಎಂದರು.

ಇಂದಿನ ಆಧುನಿಕ ವೈದ್ಯಕೀಯ ವ್ಯವಸ್ಥೆಯಲ್ಲಿ ಅನೇಕ ಬ್ರೇನ್ ಟ್ಯೂಮರ್‌ಗಳನ್ನು ಸಂಪೂರ್ಣವಾಗಿ ಅಥವಾ ಹೆಚ್ಚಿನ ಪ್ರಮಾಣದಲ್ಲಿ ನಿಯಂತ್ರಿಸುವುದು, ಚಿಕಿತ್ಸಿಸುವುದು ಸಾಧ್ಯವಿದೆ. ನರಮಂಡಲದ ಯಾವುದೇ ಸಮಸ್ಯೆಯನ್ನು ಸಾಮಾನ್ಯ ಅಥವಾ ಕ್ಷುಲ್ಲಕವೆಂದು ನಿರ್ಲಕ್ಷಿ ಸದೇ ತಕ್ಷಣ ತಜ್ಞರ ನೆರವು ಪಡೆಯುವುದು ಅತ್ಯಂತ ಮುಖ್ಯ. ಒತ್ತಡದ ಜೀವನಶೈಲಿ ಅಥವಾ ಸಾಮಾನ್ಯ ಸಮಸ್ಯೆಗಳೆಂದು ತಪ್ಪಾಗಿ ಅರ್ಥೈಸುವುದೇ ಹೆಚ್ಚಿನ ಅಪಾಯಕ್ಕೆ ಕಾರಣವಾಗುತ್ತದೆ ಎಂದು ಎಚ್ಚರಿಸಿದರು.

ಆಸ್ಪತ್ರೆಯಲ್ಲಿ ನ್ಯೂರೋ-ನ್ಯಾವಿಗೇಷನ್, ಇಂಟ್ರಾ ಆಪರೇಟಿವ್ ಅಲ್ಟ್ರಾಸೌಂಡ್, ಇಂಟ್ರಾ ಆಪರೇಟಿವ್ ನ್ಯೂರೋ ಮಾನಿಟರಿಂಗ್, ಹೈ-ಎಂಡ್ ಮೈಕ್ರೋಸ್ಕೋಪ್‌ಗಳು, ಎಂಡೋ ಸ್ಕೋಪ್‌ಗಳು, ಎಕ್ಸೋಸ್ಕೋಪ್‌ಗಳು ಸೇರಿ ಅತ್ಯಾಧುನಿಕ ತಂತ್ರಜ್ಞಾನ ಲಭ್ಯವಿದೆ. ಈ ತಂತ್ರ ಜ್ಞಾನಗಳ ನೆರವಿನಿಂದ ಮೆದುಳಿನ ಅತೀ ಸೂಕ್ಷ್ಮ ಹಾಗು ಅಪಾಯಕಾರಿ ಪ್ರದೇಶಗಳಲ್ಲಿರುವ ಗಡ್ಡೆಗಳನ್ನು ಗರಿಷ್ಠ ನಿಖರತೆಯಿಂದ ಹಾಗು ಕಡಿಮೆ ಅಪಾಯದೊಂದಿಗೆ ಶಸ್ತ್ರಚಿಕಿತ್ಸೆ ಮಾಡುವುದು ಸಾಧ್ಯವಾಗಿದೆ ಎಂದು ವಿಶ್ವಾಸವ್ಯಕ್ತಪಡಿಸಿದರು.

## ಬಯಲು ಸೀಮೆಯಲ್ಲಿ ನೀರಿನ ಬವಣೆ ನಿವಾರಣೆ | ಶಾಸಕ ಕೆ.ಎಂ.ಶಿವಲಿಂಗೇಗೌಡ

# ಕಾಚೇನಹಳ್ಳಿ 3ನೇ ಹಂತದ ಯೋಜನೆಗೆ 200 ಕೋಟಿ ರೂ.

• ಪ್ರಜೋದಯ ವರದಿ

**ಅರಸೀಕೆರೆ:** ಕಾಚೇನಹಳ್ಳಿ ಏತ ನೀರಾವರಿ ಯೋಜನೆ 3ನೇ ಹಂತದ ಕಾಮಗಾರಿಯಿಂದ ಗಂಡಸಿ ಹೋಬಳಿ ಕೆರೆಕಟ್ಟೆಗಳಿಗೆ ನೀರು ಹರಿಯಲಿದ್ದು, ಅದಕ್ಕಾಗಿ 200 ಕೋಟಿ ರೂ. ಅನು ದಾನ ಬಿಡುಗಡೆಯಾಗಿದೆ ಎಂದು ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರು ಹೇಳಿದರು.

7 ಕೋಟಿ ರೂ. ಅನುದಾನದಲ್ಲಿ ಕೈಗೊಂಡಿರುವ ತಾಲ್ಲೂಕಿನ ಗಂಡಸಿ ಹ್ಯಾಂಡ್ ಪೋಸ್ಟ್ ವೃತ್ತ ಅಗಲೀಕರಣ ಮತ್ತು ಅಭಿವೃದ್ಧಿ ಕಾಮಗಾರಿಗೆ ಶನಿವಾರ ಚಾಲನೆ ನೀಡಿ ಮಾತನಾಡಿ, ಹೇಮಾವತಿ ನದಿ ಮೂಲದಿಂದ ಕಾಚೇನಹಳ್ಳಿ ಏತ ನೀರಾವರಿ ಯೋಜನೆಯಡಿ ಮೂರನೇ ಹಂತದಲ್ಲಿ ಕೈಗೆತ್ತಿ ಕೊಳ್ಳಲಾಗುತ್ತಿರುವ ಕಾಮಗಾರಿಯಲ್ಲಿ ಗಂಡಸಿ ಹೋಬಳಿಯ ಕೆರೆಕಟ್ಟೆಗಳಿಗೆ ನೀರು ಹರಿಸಲಾಗುವುದು. ಯೋಜನೆ ಅನುಷ್ಠಾನಕ್ಕೆ 200 ಕೋಟಿ ರೂ. ಅನುದಾನ ಬಿಡುಗಡೆ ಆಗಿದೆ. ಶೀಘ್ರವೇ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಆಹ್ವಾನಿಸಿ ಕಾಮಗಾರಿಗೆ ಚಾಲನೆ ನೀಡಲಾಗುವುದೆಂದರು.



**ಮತದಾರರ ಋಣ ತೀರಿಸುವೆ**

ನಾನು ಗಂಡಸಿ ಹೋಬಳಿಯ ಮಗನಾಗಿದ್ದು, ಈ ಮಣ್ಣಿನ ಹಾಗು ನಿಮ್ಮ ಋಣವನ್ನು ತೀರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇನೆ. ಹೋಬಳಿ ಅಭಿವೃದ್ಧಿಗೆ ಸಂಬಂಧಿಸಿ ರಾಜಕೀಯ ಭಿನ್ನಾಭಿಪ್ರಾಯ ಅಡ್ಡ ಬರಬಾರದು. ವಿರೋಧ ಪಕ್ಷದವರು ಸಹ ಅಭಿವೃದ್ಧಿಗೆ ಸಹಕರಿಸಬೇಕೆಂದರು.

ಕಾಚೇನಹಳ್ಳಿ ಮೂರನೇ ಹಂತದ ಕಾಮಗಾರಿ ಗಂಡಸಿ ಹೋಬಳಿ ಜನರ ನೀರಿನ ಬವಣೆ ನೀಗಿಸುವುದರಲ್ಲಿ ಸಂದೇಹವಿಲ್ಲ. ಅದೇ ರೀತಿ ಭದ್ರಾ ಮೇಲ್ದಂಡೆ ಯೋಜನೆ ಬಾಣಾವರ ಹೋಬಳಿ, ಎತ್ತಿನಹೊಳೆ ಯೋಜನೆ ಮೂಲಕಕಸಬಾ ಹೋಬಳಿ ಹೀಗೆ ಗ್ರಾಮೀಣ ಭಾಗದ ಪ್ರತಿಯೊಂದು ಹಳ್ಳಿಗಳಿಗೂ ಒಂದಲ್ಲ ಒಂದು ನದಿ ಮೂಲದಿಂದ ನೀರು ಹರಿಸುವ ಕೆಲಸ ಸಾಕಾರ ರೂಪ ಪಡೆದುಕೊಂಡಿದೆ ಎಂದರು.

ಗಂಡಸಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೆಟ್ರೋ ಬಾಬು ಅವರು ಮಾತನಾಡಿ, ಅಭಿವೃದ್ಧಿ ವಿಷಯಕ್ಕೆ ಸಂಬಂಧಿಸಿ ದಂತೆ ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರು ಕ್ರಾಂತಿ ಮಾಡಿದ್ದಾರೆ. ರಾಜ್ಯದಲ್ಲೇ ಅರಸೀಕೆರೆ ಕ್ಷೇತ್ರ ಮಾದರಿ ವಿಧಾನಸಭಾ ಕ್ಷೇತ್ರವಾಗಿ ರೂಪುಗೊಳ್ಳುತ್ತಿರುವುದರಲ್ಲಿ ಸಂದೇಹವಿಲ್ಲ ಎಂದು ಶ್ಲಾಘಿಸಿದರು.

ಹೊಸದಾಗಿ ವಿಸ್ತಾರಗೊಳ್ಳುತ್ತಿರುವ ಗಂಡಸಿ ಹ್ಯಾಂಡ್ ಪೋಸ್ಟ್ ವೃತ್ತದಲ್ಲಿ ನಾಡಪ್ರಭು ಕೆಂಪೇಗೌಡರ ಪುತ್ಥಳಿ ಪ್ರತಿಷ್ಠಾಪಿಸಿ ಎಂದು ಮನವಿ ಮಾಡಿದರು.

**ಜೆಡಿಎಸ್ ತೊರೆದಿದ್ದಕ್ಕೆ ಅಭಿವೃದ್ಧಿ**

ನಾನು ಜೆಡಿಎಸ್ ಪಕ್ಷ ಬಿಟ್ಟು ಕಾಂಗ್ರೆಸ್ ಸೇರಿದ್ದಕ್ಕೆ ಕ್ಷೇತ್ರದಲ್ಲಿ ನೀರಾವರಿ ಸೇರಿ ಎಲ್ಲಾ ಕಾಮಗಾರಿ ಆಗುತ್ತಿವೆ. ಜೆಡಿಎಸ್‌ನಲ್ಲಿದ್ದರೆ ಅನುದಾನ ಸಿಗುತ್ತ ಲೇ ಇರಲಿಲ್ಲವೆಂದು ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರು ಹೇಳಿದರು. ವಿವಿಧ ಯೋಜನೆಗಳ ಅಡಿಯಲ್ಲಿ ಕ್ಷೇತ್ರದ ನಗರ ಹಾಗು ಗ್ರಾಮೀಣ ಭಾಗದ ಸಮಗ್ರ ಅಭಿವೃದ್ಧಿಗೆ ಸಾಕಷ್ಟು ಹಣ ತಂದಿದ್ದು, ಇಡೀ ತಾಲ್ಲೂಕನ್ನು ಪ್ರಗತಿ ಪಥದತ್ತ ಕೊಂಡೊಯ್ಯಲಾ ಗುವುದು. ಪಕ್ಷಾಂತರ ಮಾಡಿದ್ದಕ್ಕೆ ಕಾರಣ ಏನೆಂಬುದರ ಸಕಾರಣ ಈಗ ಎಲ್ಲರಿಗೂ ಅರ್ಥವಾಗುತ್ತಿದೆ ಎಂದರು.

ಕಾಂಗ್ರೆಸ್ ಮುಖಂಡರಾದ ರಾಮಚಂದ್ರ, ಎಪಿಎಂಸಿ ಮಾಜಿ ಅಧ್ಯಕ್ಷ ಜಯರಾಂ, ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಅಯ್ಯಣ್ಣ, ಮುಖಂಡರಾದ ಮಂಜುರಾಜ್, ಮಲ್ಲೇಶಣ್ಣ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಈಶ್ವರಪ್ಪ ಇದ್ದರು.

CMYK CMYK CMYK CMYK

## ನ.30ಕ್ಕೆ ರಾಜ್ಯೋತ್ಸವ

• ಪ್ರಜೋದಯ ವರದಿ

**ಹೊಳೆನರಸೀಪುರ:** ದಲಿತ ಸಾಹಿತ್ಯ ಪರಿಷತ್ತಿನ ವತಿಯಿಂದ ಕನ್ನಡ ರಾಜ್ಯೋತ್ಸವ ಆಚರಣೆಯ ಅಂಗವಾಗಿ ಜಿಲ್ಲಾ ಮಟ್ಟದ ಕವಿಗೋಷ್ಠಿ ಆಯೋಜಿಸುತ್ತಿರುವುದಾಗಿ ದ.ಸಾ.ಪ ತಾಲೂಕು ಘಟಕದ ಉಪಾಧ್ಯಕ್ಷ ಕೆ.ಎಂ.ನಾಗರಾಜ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆಗೆ ಕೋರಿದ್ದು, ಪಟ್ಟಣದ ಶಿಕ್ಷಕರ ಭವನದಲ್ಲಿ ನ.30 ರ ಭಾನುವಾರ ರಾಜ್ಯೋತ್ಸವ ಆಚರಿಸಲಾಗುತ್ತಿದೆ. ಕಾರ್ಯಕ್ರಮದ ಅಂಗವಾಗಿ ಜಿಲ್ಲಾ ಮಟ್ಟದ ಕವಿಗೋಷ್ಠಿಯನ್ನು ನಡೆಸಲಾಗುತ್ತಿದೆ ಎಂದಿದ್ದಾರೆ.

ಜಿಲ್ಲೆಯ ಎಲ್ಲ ತಾಲ್ಲೂಕುಗಳಿಂದಲೂ ನಮ್ಮ ಸ್ವರಚಿತ ಕವಿತೆಗಳನ್ನು ವಾಚನ ಮಾಡುವವರು ನ.28 ರ ಶುಕ್ರವಾರದೊಳಗೆ ತಮ್ಮ ಹೆಸರನ್ನು ಮೊ.ಸಂಖ್ಯೆ 8867300200, 9880033867 ಗೆ ಕರೆ ಮಾಡಿ ನೊಂದಾಯಿಸಿಕೊಳ್ಳಬೇಕಿದೆ. ವಿಜೇತರಿಗೆ ಪ್ರಶಸ್ತಿಪತ್ರ ಹಾಗೂ ನೆನಪಿನ ಕಾಣಿಕೆ ನೀಡಿ ಪ್ರೋತ್ಸಾಹಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದ್ದಾರೆ.

# ಪ್ರತಿಭಾ ಕಾರಂಜಿಗೆ ಹೆಚ್ಚಿನ ಅನುದಾನ ನೀಡಲಿ

## ಪ್ರತಿಭೆಗೆ ಸೂಕ್ತ ವೇದಿಕೆ ಕಲ್ಪಿಸಲಿ | ಶಾಸಕ ಸಿಮೆಂಟ್ ಮಂಜು ಒತ್ತಾಯ

• ಪ್ರಜೋದಯ ವರದಿ

**ಸಕಲೇಶಪುರ:** ಮಕ್ಕಳಲ್ಲಿ ಅಡಗಿರುವ ಪ್ರತಿಭೆಗಳನ್ನು ಅನಾವರಣಗೊಳಿಸುವ ಪ್ರತಿಭಾ ಕಾರಂಜಿ ಕಾರ್ಯಕ್ರಮಗಳಿಗೆ ಸರ್ಕಾರ ಹೆಚ್ಚಿನ ಅನುದಾನ ನೀಡುವಂತೆ ಶಾಸಕ ಸಿಮೆಂಟ್ ಮಂಜು ಅವರು ಒತ್ತಾಯಿಸಿದರು.



ತಾಲ್ಲೂಕಿನ ಹಾನುಬಾಳು ಕೆಪಿಎಸ್ ಶಾಲೆಯಲ್ಲಿ ಶುಕ್ರವಾರ ಏರ್ಪಡಿಸಿದ್ದ ಹಾನುಬಾಳು, ರಕ್ಷಿದಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳಲ್ಲಿ ಹುದುಗಿರುವ ಸಾಂಸ್ಕೃತಿಕ ಮತ್ತು ಪಠ್ಯೇತರ ಚಟುವಟಿಕೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಪ್ರತಿಭೆಗೆ ಸೂಕ್ತ ವೇದಿಕೆ ಕಲ್ಪಿಸಿ, ಮುಖ್ಯ ವಾಹಿನಿಗೆ ತರಲು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಶಾಲಾ, ಕ್ಲಸ್ಟರ್, ಬ್ಲಾಕ್, ಜಿಲ್ಲೆ ಮತ್ತು ರಾಜ್ಯ ಮಟ್ಟದಲ್ಲಿ ಸ್ಪರ್ಧೆಗಳನ್ನು ಆಯೋಜಿಸುತ್ತಿರುವ ಶಾಲೆಗಳಿಗೆ ಸರ್ಕಾರ ಹೆಚ್ಚು ಅನುದಾನ ನೀಡಬೇಕು ಈ ಕುರಿತಂತೆ ಸಂಬಂಧಪಟ್ಟ ಸಚಿವರೊಂದಿಗೆ ಮಾತನಾಡುವುದಾಗಿ ತಿಳಿಸಿದರು.

ಶಿಕ್ಷಕರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಜೊತೆಗೆ ಉತ್ತಮ ಸಂಸ್ಕಾರ ಮೂಡಿಸಬೇಕು ಅಂದಾಗ ಒಳ್ಳೆಯ ನಾಗರೀಕರಾಗಿ ಜೀವನ ನಡೆಸಲು ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳಲ್ಲಿ ವ್ಯಕ್ತಿತ್ವ ಹಾಗೂ ಸ್ಪರ್ಧಾತ್ಮಕ ಮನೋಭಾವ ಬೆಳೆಯಲು ಪ್ರತಿಭಾ ಕಾರಂಜಿ ಸೂಕ್ತ ವೇದಿಕೆಯಾಗಿದೆ. ಪ್ರತಿಭಾ ಕಾರಂಜಿ ಪ್ರತಿ ಮಗುವು ಸಹ ಸ್ವಯಂ ಪ್ರೇರಣೆಯಿಂದ ಭಾಗವಹಿಸುವಂತೆ ಮಾಡುತ್ತದೆ. ಶಿಕ್ಷಕರು ಮಕ್ಕಳಲ್ಲಿರುವ ಪ್ರತಿಭೆ ಗುರುತಿಸಿ, ಪ್ರೋತ್ಸಾಹ ನೀಡಬೇಕು. ಅವರಲ್ಲಿರುವ ಕೀಳರಿಮೆ ಹಾಗು ಸಂಕುಚಿತ ಮನೋಭಾವವನ್ನು ದೂರು ಮಾಡಬೇಕೆಂದು ಹೇಳಿದರು.

ಶೈಕ್ಷಣಿಕ ಪ್ರಗತಿಯಲ್ಲಿ ತಾಲ್ಲೂಕು ಗಣನೀಯ ಸಾಧನೆ ಮಾಡಿದೆ. ಎಸ್ ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಮೊದಲ ಸ್ಥಾನ ಹಾಗು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿರುವುದು ಹೆಮ್ಮೆಯ ವಿಷಯವಾಗಿದೆ ಎಂದರು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹರೀಶ್ ಅವರು ಮಾತನಾಡಿ, ಶಿಕ್ಷಣ ಪಡೆದ ವಿದ್ಯಾರ್ಥಿಯು ಸಮಾಜದಲ್ಲಿ ಸ್ವಚ್ಛಂದ ನಾಗರಿಕನಾಗಿದ್ದಾನೆಯೇ ಎಂದು ನಾವ್ಯಾರು ಗಮನಿಸುವುದಿಲ್ಲ. ಇಂದು ನಾವೆಲ್ಲರೂ ಸಂವಿಧಾನದ ಹಕ್ಕುಗಳ ಬಗ್ಗೆ ಮಾತ್ರ ಮಾತನಾಡುತ್ತೇವೆ ಕರ್ತವ್ಯಗಳ ಪಾಲನೆಗಳ ಚಿಂತಿಸದಿರುವುದು ವಿಷಾದ ಸಂಗತಿ ಎಂದು ಹೇಳಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಸಂತೋಷ್, ಎಸ್.ಡಿ.ಎಂ.ಸಿ ಅಧ್ಯಕ್ಷ ಅರುಣ್ ಕುಮಾರ್, ಕ್ಷೇತ್ರ ಶಿಕ್ಷಣ ಸಂಯೋಜಕರಾದ ಗಂಗಾಧರ್, ಕೆಪಿಎಸ್ ಶಾಲೆಯ ಹಿರಿಯ ವಿದ್ಯಾರ್ಥಿ ಬಳಗದ ಅಧ್ಯಕ್ಷ ಚಂದ್ರಶೇಖರ್, ದೇವಾಲದಕೆರೆ ಗ್ರಾ.ಪಂ ಉಪಾಧ್ಯಕ್ಷ ರವೀಂದ್ರ, ಇಂಡಿಯನ್ ಸ್ಕೂಲ್ ಎಸ್‌ಡಿ ಎಂಸಿ ಅಧ್ಯಕ್ಷ ರಾಜಕುಮಾರ್, ಮುಖಂಡರಾದ ಅಗ್ನಿ ಸೋಮಶೇಖರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಜೆಡಿಎಸ್ ಮತ್ತೊಮ್ಮೆ ತಲೆ ಎತ್ತಿ ನಿಲ್ಲಬೇಕು

» ಮೊದಲನೇ ಪುಟದಿಂದ

2 ಕೋಟಿ ರೂ. ಸಾಲ ತಂದು ನಾನು ಚುನಾವಣೆಗೆ ಹೋಗಿದ್ದೆ. ಆ ನಂತರ ಸಿದ್ದರಾಮಯ್ಯ ಅವರನ್ನ ಕನ್ನಡ ಕಾವಲು ಸಮಿತಿ ಅಧ್ಯಕ್ಷರನ್ನಾಗಿ ಮಾಡಿದ್ದೆ. ಅವರೇನು ಆಕ್ಸ್‌ಫರ್ಡ್ ಯುನಿವರ್ಸಿಟಿಯಿಂದ ಅಧ್ಯಯನ ಮಾಡಿ ಬಂದಿದ್ದರಾ. ಸುಪ್ರಿಂಕೋರ್ಟ್ ಲಾಯರ್ ಆಗಿದ್ದರಾ. ಮೈಸೂರಲ್ಲಿ ಒಂದೆರಡು ಕೇಸ್ ಮಾಡಿದ್ದರೋ ಇಲ್ವೋ ಗೊತ್ತಿಲ್ಲ. ಸಾಲ ತಂದು ನೌಕರರಿಗೆ ಸಂಬಳ ಕೊಡುತ್ತಿದ್ದ ಸಂದರ್ಭದಲ್ಲಿ ಹಣಕಾಸು ಸಚಿವರನ್ನಾಗಿ ಮಾಡಿದ್ದೆ. ಆಗ ಇವರ ಕೊಡುಗೆ ಏನಿತ್ತು ಎಂದು ಕಿಡಿಕಾರಿದರು.

ಸಿದ್ದರಾಮಯ್ಯ ಅವರನ್ನ ಪಕ್ಷದ ಅಧ್ಯಕ್ಷ ಮಾಡಬೇಕು ಅಂದಾಗ ರಾಮಕೃಷ್ಣ ಹೆಗಡೆ ಅವರು ಯಾರನ್ನಾದರು ಮಾಡು ಸಿದ್ದರಾಮಯ್ಯ ಮಾತ್ರ ಮಾಡಬೇಡ. ಸಿದ್ದರಾಮಯ್ಯ ಮೋಸ ಮಾಡುತ್ತಾನೆ ಎಂದಿದ್ದರು. ಜಾಲಪ್ಪ ಅವರನ್ನು ಮುಖ್ಯಮಂತ್ರಿ ಮಾಡಬೇಕೆಂದು ಓಬಿಸಿ ನಾಯಕರ ಎಂದು ದಾವಣಗೆರೆಯಲ್ಲಿ ಸಮಾವೇಶ ನಡೆಯಿತು. ಆ ಸಮಾವೇಶದಲ್ಲಿ ನನ್ನ ವಿರುದ್ಧವೇ ಮಾತನಾಡಿದರು. ಆನಂತರ ಕಾಂಗ್ರೆಸ್‌ಗೆ ಸೇರೋ ಪ್ರಯತ್ನ ಮಾಡಿದರು. ಬಳಿಕ ಎಸ್.ಎಂ.ಕೃಷ್ಣ ಅವರ ಜೊತೆ ಮಾತುಕತೆ ಆಗಿ ಸಿದ್ದರಾಮಯ್ಯ ಕಾಂಗ್ರೆಸ್‌ಗೆ ಸೇರಿಕೊಂಡರು ಎಂದು ಮಾಹಿತಿ ಬಿಚ್ಚಿಟ್ಟಿದ್ದಾರೆ.

**ಸಹವಾಸ ಬೇಡವೆಂದು ಎನ್‌ಡಿಎ ಸೇರಿದ್ವಿ:**

18 ಜನರನ್ನ ದೆಹಲಿಗೆ ಕಳಿಸಿ ಕುಮಾರಸ್ವಾಮಿ ಸರ್ಕಾರ ತೆಗೆದರು. ಅದಾದ ಬಳಿಕ ಇವರ ಸಹವಾಸ ಬೇಡ ಎಂದು ಎನ್‌ಡಿಎ ಜೊತೆ ಸೇರಿದ್ವಿ. ತಮಿಳುನಾಡಿನಲ್ಲಿ ನಮ್ಮ ಸಮುದಾಯ 30 ಲಕ್ಷ ಜನ ಇದ್ದಾರೆ. ಅಲ್ಲಿ ಸಂಘಟನೆ ಮಾಡಿ. ಮುಂದಿನ ಚುನಾವಣೆಯಲ್ಲಿ ಶಾ, ಮೋದಿ ಜೊತೆ ಮಾತಾಡಿ ಅಲ್ಲಿ ಎರಡು ಟಿಕೆಟ್ ತರೋ ಪ್ರಯತ್ನ ಮಾಡುತ್ತೇನೆ. ದೇವೇಗೌಡ ಯಾವತ್ತು ಕೂತು ಕೊಳ್ಳೊಲ್ಲ. ಎಲ್ಲಾ ಕಡೆ ನಾನು ಹೋಗುತ್ತೇನೆ. ನಾವು ಎನ್‌ಡಿಎ ಜೊತೆ ಇದ್ದೇವೆ ಎಂದು ಕಾರ್ಯಕರ್ತರು ಮರೆಯಬಾರದು. ಕುಮಾರಸ್ವಾಮಿ ಅವರಿಗೆ ಮೋದಿ ಅವರು ದೊಡ್ಡ ಖಾತೆ ಕೊಟ್ಟು 8ನೇ ಸ್ಥಾನದಲ್ಲಿ ನಮಗೆ ಜಾಗ ಕೊಟ್ಟಿದ್ದಾರೆ. ನಾವು ಯಾವುದೇ ಕಾರಣಕ್ಕೂ ಎನ್‌ಡಿಎ ಸಂಪರ್ಕ ಕಳೆದುಕೊಳ್ಳಲ್ಲ. ಆದರೆ, ನಮ್ಮ ಪಕ್ಷವೂ ಸಂಘಟನೆ ಆಗಬೇಕು ಎಂದು ಕಾರ್ಯಕರ್ತರು, ನಾಯಕರಿಗೆ ಕರೆ ನೀಡಿದರು.

## ಬಟ್ಟೆ, ಕಾರು, ಕಟ್ಟಡದಲ್ಲಿ ಮನುಷ್ಯನ ಮೌಲ್ಯ ಅಳೆಯಲಾಗುತ್ತಿದೆ

» ಮೊದಲನೇ ಪುಟದಿಂದ

ಅವರ ಬದುಕಿನ ನಿರ್ಧಾರಗಳು ಮತ್ತು ನಮ್ಮ ಹಾದಿಗಳು ಒಂದೇ ನಕ್ಷೆಯಲ್ಲಿ ಕಾಣುವುದು ಕಷ್ಟ. ಜೀವನದ ಗತಿಯೇ ಬದಲಾಗಿದೆ ಎಂದರು. ಬೆಂಗಳೂರು ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಿಶ್ಚಲನಂದ ನಾಥ ಸ್ವಾಮೀಜಿ, ಹಿರಿಯ ಪತ್ರಕರ್ತ ಆರ್.ಪಿ.ವೆಂಕಟೇಶಮೂರ್ತಿ, ಕೃತಿಯ ಲೇಖಕ ಉಮೇಶ್ ತೆಂಕನಹಳ್ಳಿ, ಸಾಹಿತಿ ದಯಾ ಗಂಗನಘಟ್ಟ, ಚನ್ನರಾಯಪಟ್ಟಣ ತಾಲ್ಲೂಕು ಕಸಾಪ ಅಧ್ಯಕ್ಷ ಹೆಚ್.ಎನ್.ಲೋಕೇಶ್, ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಬಿ.ಆರ್.ಬೊಮ್ಮೇಗೌಡ ಇನ್ನಿತರರು ಇದ್ದರು.

## ಸರ್ಕಾರಿ ನೌಕರರ ರಾಜ್ಯ ಸಂಘಕ್ಕೆ ನಾಮ ನಿರ್ದೇಶನ: ಅಭಿನಂದನೆ



• ಪ್ರಜೋದಯ ವರದಿ

**ಬೇಲೂರು:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ (ರಿ), ಬೆಂಗಳೂರು ರಾಜ್ಯ ಸಂಘಕ್ಕೆ ರಾಜ್ಯ ಪರಿಷತ್ ಸದಸ್ಯರಾಗಿ ನಾಮ ನಿರ್ದೇಶನಗೊಂಡಿರುವ ಬಿ.ಎಸ್. ಆನಂದ ಕುಮಾರ್ ಅವರನ್ನು ಬೇಲೂರು ಶಾಖೆಯ ವತಿಯಿಂದ ಗೌರವಿಸಿ ಸನ್ಮಾನಿಸಲಾಯಿತು.

ಪಟ್ಟಣದ ಸರ್ಕಾರಿ ನೌಕರರ ಭವನದಲ್ಲಿ ಏರ್ಪಡಿಸಿದ್ದ ಅಭಿನಂಧನ ಕಾರ್ಯಕ್ರಮದಲ್ಲಿ ನೌಕರರ ಸಂಘದ ಅಧ್ಯಕ್ಷ ಮಂಜುನಾಥ್ ಮಾತನಾಡಿ, ಬೇಲೂರು ಶಾಖೆಯಿಂದ ರಾಜ್ಯ ಮಟ್ಟದ ಪ್ರತಿನಿಧಿತ್ವ ಸಿಕ್ಕಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ವಿಷಯ. ನೌಕರರ ಹಿತಾಸಕ್ತಿಯ ಪರವಾಗಿ ಆನಂದಕುಮಾರ್ ಅವರು ಸದಾ ಮುಂಚೂಣಿಯಲ್ಲಿ ಕಾರ್ಯ ನಿರ್ವಹಿಸಿದ್ದಾರೆ. ರಾಜ್ಯ ಮಟ್ಟದಲ್ಲಿಯೂ ಅವರು ಸಂಸ್ಥೆಗೆ ಗೌರವ ತಂದು ಕೊಡಲಿದ್ದಾರೆ ಎಂಬ ವಿಶ್ವಾಸ ಇದೆ ಎಂದು ಹೇಳಿದರು.

ಸಭೆಯಲ್ಲಿ ತಾಲೂಕು ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಧರ್ಮಗೌಡ ಮಾತನಾಡಿ, ನೌಕರರ ಹಕ್ಕು- ಹಿತಗಳನ್ನು ಕಾಪಾಡಲು ಬಲವಾದ ನಾಯಕತ್ವ ಅತ್ಯಗತ್ಯ. ಆನಂದಕುಮಾರ್ ಅವರ ಸಂಯಮ, ಸಂಘಟನಾ ಶಕ್ತಿ ಹಾಗೂ ಸೇವಾ ಮನೋಭಾವ ರಾಜ್ಯ ಪರಿಷತ್ತಿನಲ್ಲೂ ಪರಿಣಾಮಕಾರಿಯಾಗಿ ಕೆಲಸ ಮಾಡಲು ನೆರವಾಗುತ್ತದೆ.

ಕಾರ್ಯಕ್ರಮದಲ್ಲಿ ರವಿ, ಸಂತೋಷ್, ಹೇಮಂತ್ ಕುಮಾರ್, ವೀರಭದ್ರಪ್ಪ ಸೇರಿದಂತೆ ಹಲವು ಪದಾಧಿಕಾರಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು.

# ಮಾತೃಭಾಷೆ ಕಡೆಗಣಿಸಿದರೆ ದೇಶ ಮರೆತಂತೆ

## ವಿಶ್ವದ ಯಾವುದೇ ಮೂಲೆಗೆ ಹೋದರೂ ಕನ್ನಡ ಭಾಷೆಗೆ ತನ್ನದೇ ಆದ ಗೌರವವಿದೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಮಾತೃಭಾಷೆಯನ್ನು ಕಡೆಗಣಿಸಿದರೆ ದೇಶವನ್ನು ಮರೆತಂತೆಯೇ ಸರಿ ಎಂದು ಕನ್ನಡ ಸಾಹಿತ್ಯ ಪರಿಷತ್ ಹೋಬಳಿ ಘಟಕದ ಅಧ್ಯಕ್ಷ ಹೆಚ್.ಎ.ಪ್ರಮೋದ್ ಅವರು ಹೇಳಿದರು.



ತಾಲ್ಲೂಕಿನ ಹಿರೀಸಾವೆ ಗ್ರಾಮದ ಜ್ಞಾನಪ್ರಭ ಇಂಟರ್ ನ್ಯಾಷನಲ್ ಸ್ಕೂಲ್‌ನಲ್ಲಿ ಏರ್ಪಡಿಸಿದ್ದ ಮಕ್ಕಳ ದಿನಾಚರಣೆ ಹಾಗೂ ಕನ್ನಡ ರಾಜ್ಯೋತ್ಸವದಲ್ಲಿ ಮಾತನಾಡಿ, ಕನ್ನಡವು ಭಾಷೆಯಷ್ಟೇ ಅಲ್ಲ ನಮ್ಮ ಬದುಕು ಎಂದರು.

ವ್ಯಾವಹಾರಿಕ ಹಾಗೂ ಅಗತ್ಯ ಸ್ಥಳಗಳಲ್ಲಿ ಅನ್ಯ ಭಾಷೆಗಳ ಬಳಕೆ ಅನಿವಾರ್ಯ. ಆದರೆ ದೈನಂದಿನ ಬದುಕಿನಲ್ಲಿ ಪ್ರತಿ ಕ್ಷಣವೂ ಮಾತೃಭಾಷೆ ರೂಢಿಯಲ್ಲಿರಲಿ. ಕಡೆಗಣಿಸಿದರೆ ನಮಗೆ ಜನ್ಮ ನೀಡಿದ ತಾಯಿಗೆ ದ್ರೋಹ ಬಗೆದಷ್ಟೇ ಸಮ ಎಂದು ಅವರು ತಿಳಿಸಿದರು.

ಟೀವಿ ವೀಕ್ಷಣೆ ಹಾಗೂ ಮೊಬೈಲ್ ಬಳಕೆಯಿಂದ ತಮ್ಮ ಮಕ್ಕಳನ್ನು ದೂರ ಇಡುವುದು ಸೂಕ್ತ. ಮೊಬೈಲ್ ಬದಲು ಮಕ್ಕಳ ಕೈಗೆ ಒಳ್ಳೆಯ ಪುಸ್ತಕ ನೀಡಿ ಓದುವ ಹವ್ಯಾಸವನ್ನು ಬೆಳೆಸುವುದು ಪಾಲಕರ ಕರ್ತವ್ಯವಾಗಿದೆ ಎಂದು ಅವರು ಕಿವಿಮಾತು ಹೇಳಿದರು.

ಆಧುನಿಕತೆ ಬೆಳೆದಂತೆಲ್ಲ ಮಕ್ಕಳಲ್ಲಿ ಸಂಸ್ಕಾರ ಹಾಗೂ ಸಂಸ್ಕೃತಿ ಕಡಿಮೆಯಾಗುತ್ತಿದೆ. ಗುರು ಹಿರಿಯರಿಗೆ ಗೌರವ ನೀಡುವ ಪದ್ಧತಿ ಕಣ್ಮರೆಗೆ ಸರಿಯುತ್ತಿದೆ. ಮಕ್ಕಳನ್ನು ಪ್ರಶ್ನಿಸುವ ಪಾಲಕರು ಇಲ್ಲದಾಗಿದೆ. ಪೋಷಕರು ಹೆಚ್ಚೆತ್ತುಕೊಳ್ಳದಿದ್ದಲ್ಲಿ ಮುಂದೊಂದು ದಿನ ಪಶ್ಚಾತ್ತಾಪ ಪಡಬೇಕಾಗುತ್ತದೆ. ಶೈಕ್ಷಣಿಕ ವ್ಯವಸ್ಥೆ ಹಾಗೂ ಮನೆಯ ವಾತಾವರಣದಲ್ಲಿ ಸಂಸ್ಕಾರ ನೀಡುವ ವ್ಯವಸ್ಥೆಯಾಗಬೇಕು ಎಂದು ಅವರು ಎಚ್ಚರಿಸಿದರು.

ಜ್ಞಾನಪ್ರಭ ಇಂಟರ್ನ್ಯಾಷನಲ್ ಶಾಲೆಯ ಸಂಸ್ಥಾಪಕ ಅಧ್ಯಕ್ಷ ಎ.ಜಿ. ಪ್ರಭಾಕರ್ ಮಾತನಾಡಿ, ಕನ್ನಡವು ಕೇವಲ ಭಾಷೆಯಾಗಿಯೇ ಉಳಿದಿಲ್ಲ. ನಮ್ಮ ಬದುಕಿನ ಭಾಗವಾಗಿದ್ದು, ಸಂಸ್ಕೃತಿಯ ನೆಲೆಗಟ್ಟು ರೂಪಿಸಿದೆ. ಭಾಷೆಯೇ ನಮ್ಮೆಲ್ಲರ ಭಾವನೆಯಾಗಿದೆ ಎಂದರು.

ಬೇರೆ ದೇಶ ಅಥವಾ ರಾಜ್ಯಗಳಿಗೆ ತೆರಳಿ ನೆಲೆಸಿದ ಸಂದರ್ಭ ಅಲ್ಲಿಯ ಭಾಷೆ ಕಲಿಯುವುದು ಕಷ್ಟಕರ ಸಂಗತಿಯಾಗಲಿದೆ. ಆದರೆ ಇಲ್ಲಿಗೆ ಯಾರೇ ಬಂದರೂ ಸ್ವಲ್ಪ ದಿನಗಳಲ್ಲಿಯೇ ಸುಲಭವಾಗಿ ನಮ್ಮ ಭಾಷೆಯನ್ನು ಕಲಿತು ಕನ್ನಡದಲ್ಲಿ ಸ್ಪಷ್ಟವಾಗಿ ಮಾತನಾಡುತ್ತಾರೆ.

ಅಲ್ಲದೆ ನಮ್ಮ ಕನ್ನಡ ಭಾಷೆಯನ್ನು ಕಲಿಯಲು ಉತ್ಸುಕರಾಗುವುದನ್ನು ಕಂಡಿದ್ದೇವೆ. ವಿಶ್ವದ ಯಾವುದೇ ಮೂಲೆಗೆ ಹೋದರೂ ಕನ್ನಡ ಭಾಷೆಗೆ ತನ್ನದೇ ಆದ ಗೌರವ ಸಿಗಲಿದೆ ಎಂದು ತಿಳಿಸಿದರು.

ಕನ್ನಡಿಗರು ವಿಶ್ವದ ಯಾವುದೇ ಮೂಲೆಗೆ ಹೋದರು ತಮ್ಮ ಮಾತೃಭಾಷೆಯ ಬಗ್ಗೆ ಗೌರವವಿಟ್ಟುಕೊಂಡು ಕನ್ನಡದಲ್ಲಿಯೇ ಮಾತನಾಡುವ ಮೂಲಕ ಅಭಿಮಾನ ಮೆರೆಯಬೇಕು ಎಂದು ಕಿವಿಮಾತು ಹೇಳಿದರು.

ಬಳಿಕ ವಿದ್ಯಾರ್ಥಿಗಳು ನಾಡು-ನುಡಿ, ನೆಲ- ಜಲ ಕುರಿತು ಸಾಂಸ್ಕೃತಿಕ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ಪ್ರಾಂಶುಪಾಲ ಸಂಜಯ್ ಕ್ರಿಸ್ಟೋಫರ್, ಕಾರ್ಯದರ್ಶಿ ಹರೀಶ್, ಶಿಕ್ಷಕ ವೃಂದ, ಪಾಲಕರು ಪಾಲ್ಗೊಂಡಿದ್ದರು.

## ನ.26 ರಂದು ಪಟೇಲ್ ಶಿವಪ್ಪಗೆ ಅಭಿನಂದನೆ



• ಪ್ರಜೋದಯ ವರದಿ

**ಹಾಸನ:** ತಾಲ್ಲೂಕು ಕುರುಬರ ಸಂಘದಿಂದ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿರುವ ಪಟೇಲ್ ಶಿವಪ್ಪ ಅವರಿಗೆ ನ.26 ರಂದು ನಗರದ ಕನಕ ಭವನದಲ್ಲಿ ಅಭಿನಂದನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕು ಕುರುಬರ ಸಂಘದ ಅಧ್ಯಕ್ಷ ಸಿದ್ದೇಗೌಡ ಅವರು ತಿಳಿಸಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮ ಕಾಗಿನೆಲೆ ಕನಕ ಗುರು ಪೀಠದ ಕೆ.ಆರ್.ನಗರ ಶಾಖಾ ಮಠದ ಶ್ರೀ ಶಿವಾನಂದಪುರಿ ಸ್ವಾಮೀಜಿಗಳ ಆಶೀರ್ವಾದಗಳೊಂದಿಗೆ ಸಮಾರಂಭ ನಡೆಯಲಿದೆ. ಜಿಲ್ಲೆಯ ಸಮುದಾಯದ ಎಲ್ಲಾ ಮುಖಂಡರು ಕಾರ್ಯಕ್ರಮದಲ್ಲಿ ಭಾಗಿಯಾಗುವಂತೆ ಮನವಿ ಮಾಡಿದರು.

ತಾಲೂಕು ಸಂಘದ ಪದಾಧಿಕಾರಿಗಳಾದ ಶಿವಕುಮಾರ್, ಮಲ್ಲಪ್ಪ, ಸಣ್ಣೇಗೌಡ, ರಾಜಪ್ಪ ಇದ್ದರು.

## ಒಂದೇ ಕಣ್ಣು ಹೊಂದಿದ್ದ ನಾಯಿಮರಿ ಸಾವು

• ಪ್ರಜೋದಯ ವರದಿ

**ಹೊಳೆನರಸೀಪುರ:** ತಾಲ್ಲೂಕಿನ ಚಿಕ್ಕಚಾಗಹಳ್ಳಿ ಗ್ರಾಮದ ಕೇಶವಮೂರ್ತಿ ಎಂಬುವರ ಮುಧೋಳ್ ನಾಯಿಯೊಂದು 7 ಮರಿಗಳಿಗೆ ಜನ್ಮ ನೀಡಿದ್ದು, ಇದರಲ್ಲಿ ಒಂದು ಮರಿಗೆ ಬಾಯಿಯೇ ಇಲ್ಲದೆ ಒಂದೇ ಕಣ್ಣು ಹೊಂದಿದಂತೆ ಜನಿಸಿದ್ದು, ಹುಟ್ಟಿದ ಕೆಲವೇ ಗಂಟೆಗಳಲ್ಲಿ ಮೃತಪಟ್ಟಿತು. ಉಳಿದ ಮರಿಗಳು ಬದುಕುಳಿದಿವೆ



# ಮಕ್ಕಳು ಪಠ್ಯದೊಂದಿಗೆ ವಿವಿಧ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳಲಿ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಮಕ್ಕಳಿಗೆ ಶಿಕ್ಷಣದ ಜೊತೆಗೆ ಕಲೆ ಸಾಹಿತ್ಯ ಕ್ರೀಡೆ ಸೇರಿದಂತೆ ವಿವಿಧ ಕ್ಷೇತ್ರಗಳ ಸ್ಪರ್ಧೆಗಳಲ್ಲಿ ಮಕ್ಕಳು ಭಾಗವಹಿಸುವಂತೆ ಪೋಷಕರು ಹಾಗೂ ಶಿಕ್ಷಕರು ಪ್ರೇರೇಪಿಸಬೇಕೆಂದು ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಕೆ.ಎ.ಸತೀಶ್ ಸಲಹೆ ನೀಡಿದರು.



ತಾಲ್ಲೂಕಿನ ಚೆನ್ನೇನಹಳ್ಳಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಪಾಠಶಾಲೆ ಆವರಣದಲ್ಲಿ ತಾಲ್ಲೂಕು ಶಿಕ್ಷಣ ಇಲಾಖೆ ಹಾಗೂ ಕಾರೇಹಳ್ಳಿ ಸಮೂಹ ಸಂಪನ್ಮೂಲ ಕೇಂದ್ರದ ವತಿಯಿಂದ ಆಯೋಜಿಸಿದ್ದ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಶಿಕ್ಷಣ ಇಲಾಖೆ ವತಿಯಿಂದ ಇತ್ತೀಚಿನ ವರ್ಷಗಳಲ್ಲಿ ಮಕ್ಕಳಲ್ಲಿ ಸ್ಪರ್ಧಾ ಮನೋಭಾವನೆ ಬೆಳೆಸುವ ಸಲುವಾಗಿ ಪ್ರತಿಭಾ ಕಾರಂಜಿ ಅಂತಹ ಕಾರ್ಯಕ್ರಮವನ್ನು ಆಯೋಜಿಸುತ್ತಿರುವುದು ಒಳ್ಳೆಯ ಬೆಳವಣಿಗೆಯಾಗಿದೆ ಎಂದರು.

ಕಾರೇಹಳ್ಳಿ ಗ್ರಾಮ ಪಂಚಾಯಿತಿ ವತಿಯಿಂದ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದ್ದು ಚನ್ನೇನಹಳ್ಳಿ ಗ್ರಾಮದಲ್ಲಿ ಶಾಸಕ ಸಿ.ಎನ್. ಬಾಲಕೃಷ್ಣ ಅವರ ಸಹಕಾರದಿಂದ ಹೊಸ ಕಟ್ಟಡವನ್ನು ನಿರ್ಮಾಣ ಮಾಡಲಾಗಿದೆ. ಮುಂಬರುವ ದಿನ ಗಳಲ್ಲೂ ಶಾಲೆಯ ಅಭಿವೃದ್ಧಿ ಕೆಲಸ ಗಳಿಗೆ ಹೆಚ್ಚಿನ ಸಹಕಾರ ನೀಡುವುದಾಗಿ ತಿಳಿಸಿದರು.

ಕಾರೇಹಳ್ಳಿ ಕ್ಲಸ್ಟರ್ ಸಮೂಹ ಸಂಪನ್ಮೂಲ ಕೇಂದ್ರದ ಅಧಿಕಾರಿ ಹೇಮಲತಾ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಜೊತೆಗೆ ಕಲೆ ಸಾಹಿತ್ಯ ಜ್ಞಾನಾರ್ಜನೆ ಹೆಚ್ಚಿಸುವ ಸಲುವಾಗಿ ಶಿಕ್ಷಣ ಇಲಾಖೆ ವತಿಯಿಂದ ಹಲವು ಮಕ್ಕಳ ಸ್ನೇಹಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಸರ್ಕಾರಿ ಶಾಲೆಗಳನ್ನು ಉಳಿಸುವ ಸಲುವಾಗಿ ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಸೇರಿಸುವಂತೆ ಅವರು ಮನವಿ ಮಾಡಿದರು.

ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಕಾರೇಹಳ್ಳಿ ಕ್ಲಸ್ಟರ್ ವ್ಯಾಪ್ತಿಯ ಎಲ್ಲಾ ಶಾಲೆಗಳ ಮಕ್ಕಳು ವೇಷ ಭೂಷಣ ಸ್ಪರ್ಧೆ ಸೇರಿದಂತೆ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮದ ಉದ್ಘಾಟನೆಯನ್ನು ಗ್ರಾಮ ಪಂಚಾಯತಿ ಅಧ್ಯಕ್ಷ ಸುಜಾತ ನಾಗೇಂದ್ರ ನೆರವೇರಿಸಿದರು.

ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಕೆ.ಟಿ.ನಟೇಶ್, ಗ್ರಾ.ಪಂ ಸದಸ್ಯ ಸಿಜೆ ಕುಮಾರ್, ಕೃಷಿ ಪತ್ತಿನ ನಿರ್ದೇಶಕ ಸಿ.ಡಿ. ರೇವಣ್ಣ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶಕರುಗಳಾದ ವತ್ಸಲ, ದಿನೇಶ್, ಎಸ್‌ಡಿಎಮ್‌ಸಿ ಅಧ್ಯಕ್ಷ ಧನಂಜಯ್, ಹೋಬಳಿ ಇಸಿಓ ಜಯಪ್ರಕಾಶ್, ಕಸಬಾ ಇಸಿಓ ಲೋಕೇಶ್, ಚೆನ್ನೇನಹಳ್ಳಿ ಶಾಲೆಯ ಮುಖ್ಯ ಶಿಕ್ಷಕ ಕುಮಾರಸ್ವಾಮಿ, ಸಹ ಶಿಕ್ಷಕ ಟಿ.ಎಂ.ಸಿದ್ದೇಗೌಡ, ಮುಖಂಡರಾದ ಬೊಮ್ಮೇಗೌಡ ಇತರರಿದ್ದರು.

## ಕಥೆ ಹೇಳುವ ವಿಶಿಷ್ಟ ಕಾರ್ಯಕ್ರಮ

• ಪ್ರಜೋದಯ ವರದಿ

**ಸಕಲೇಶಪುರ:** ಪಟ್ಟಣದ ರೋಟರಿ ನರ್ಸರಿ ಮಕ್ಕಳ ಶಾಲೆಯಲ್ಲಿ ಶನಿವಾರ ಪೋಷಕರು ತಮ್ಮ ಮಕ್ಕಳಿಗೆ ಕಥೆ ಹೇಳುವ ವಿಶಿಷ್ಟ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ರೋಟರಿ ಸಂಸ್ಥೆಯ ಅಧ್ಯಕ್ಷ ವಿಜಯಶಂಕರ್ ಉದ್ಘಾಟಿಸಿ ಮಾತನಾಡಿ, ಸಾಮಾನ್ಯವಾಗಿ ಮನೆಗಳಲ್ಲಿ ತಾಯಂದಿರು ಹೆಚ್ಚು ಪ್ರೀತಿಯಿಂದ ಮಕ್ಕಳನ್ನು ನೋಡಿಕೊಳ್ಳುವೊಂದಿಗೆ ಕಥೆ ಹೇಳುವುದು, ಹಳೆ ಹಾಡುಗಳನ್ನು ಹೇಳಿ ಕೊಡುವುದು, ನೀತಿ- ಮೌಲ್ಯಗಳನ್ನು ತಿಳಿಸುವುದನ್ನು ಮಾಡುತ್ತಿರುತ್ತಾರೆ. ಇಂತಹ ಸಂಸ್ಕೃತಿಯನ್ನು ಶಾಲಾ ವಾತಾವರಣದಲ್ಲೂ ಬೆಳೆಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ತಾವು ಸಕ್ರಿಯವಾಗಿ ಭಾಗವಹಿಸಿದ್ದಕ್ಕಾಗಿ ಎಲ್ಲರಿಗೂ ಅಭಿನಂದನೆಗಳು ಎಂದರು.

ರೋಟರಿ ಶಾಲೆಯ ಪ್ರಾಂಶುಪಾಲ ಸುಮಂತ್ ಭಾರ್ಗವ್ ಮಾತನಾಡಿ, ಇಂದಿನ ಕಾಲದಲ್ಲಿ ಮಕ್ಕಳಿಗೆ ಪೋಷಕರು ಮೊಬೈಲ್ ತೋರಿಸಿ ಊಟ ಮಾಡಿಸುವುದು ಹೆಚ್ಚಾಗಿದೆ. ಅದಕ್ಕೆ ಬದಲಿ, ಮಕ್ಕಳಿಗೆ ಕಥೆ ಹೇಳುತ್ತಾ ಊಟ ಮಾಡಿಸುವ ಅಭ್ಯಾಸ ಮೂಡಬೇಕು ಎಂದರು.

ಕಾರ್ಯಕ್ರಮದಲ್ಲಿ ಮಕ್ಕಳ ತಾಯಂದಿರು ತಮ್ಮ ಮಕ್ಕಳೊಂದಿಗೆ ವಿವಿಧ ರೀತಿಯ ನೀತಿ ಕಥೆಗಳನ್ನು ಅಭಿನಯದ ಮೂಲಕ ಮನರಂಜನೆಯ ಜೊತೆಗೆ ಮೌಲ್ಯಭರಿತ ಸಂದೇಶಗಳನ್ನು ಹಂಚಿಕೊಂಡರು.

ರೋಟರಿ ಶಾಲೆಯ ಮುಖ್ಯೋಪಾಧ್ಯಾಯಿನಿ ರತ್ನ, ತೀರ್ಪುಗಾರರಾಗಿ ಆಗಮಿಸಿದ ಜ್ಯೋತಿ ಪಿಂಟೋ, ರೋಟರಿ ನರ್ಸರಿ ಶಾಲೆಯ ಸಂಯೋಜಕ ಪೂಜಾ ಹಾಗೂ ಶಾಲೆಯ ಶಿಕ್ಷಕರು ಉಪಸ್ಥಿತರಿದ್ದರು.



# ಅವಕಾಶ ವಂಚಿತರನ್ನು ಮುಂದೆ ತರಬೇಕು

• ಪ್ರಜೋದಯ ವರದಿ

**ಅರಕಲಗೂಡು:** ಸಮಾಜದಲ್ಲಿ ಶೋಷಿತರು, ಅವಕಾಶ ವಂಚಿತರನ್ನು ಗುರುತಿಸಿ ಮುಂದೆ ತರುವ ಪ್ರಯತ್ನ ನಡೆಸಿದಾಗ ಸಮ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದು ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಕೆ. ಎಂ ಜಾನಕಿ ಅವರು ತಿಳಿಸಿದರು.



ಪಟ್ಟಣದಲ್ಲಿ ಶನಿವಾರ ವಿಶ್ವಚೇತನ ಜೈಭೀಮ್ ಚಾರಿಟೆಬಲ್ ಟ್ರಸ್ಟ್ ಅನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಂವಿಧಾನದ ಮೂಲಕ ಬಾಬಾ ಸಾಹೇಬ್ ಅಂಬೇಡ್ಕರ್ ಎಲ್ಲರಿಗೂ ಸಮಾನವಾದ ಅವಕಾಶಗಳನ್ನು ಕಲ್ಪಿಸಿದ್ದಾರೆ, ಅದನ್ನು ಬಳಸಿಕೊಂಡು ಉತ್ತಮ ಬದುಕು ಕಟ್ಟಿಕೊಳ್ಳಲು ಮುಂದಾಗಬೇಕು, ಅಂಬೇಡ್ಕರ್ ಅಕ್ಕಿ, ನೀರು ಕೊಟ್ಟಿದ್ದಾರೆ, ಅನ್ನ ಮಾಡಿಕೊಂಡು ಊಟ ಮಾಡುವುದನ್ನು ಕಲಿಯಬೇಕಿದೆ ಎಂದು ಸಲಹೆ ನೀಡಿದರು.

ಸಂವಿಧಾನ ನಮಗೆಲ್ಲರಿಗೂ ಸಮಾನವಾದ ಅವಕಾಶಗಳನ್ನು ನೀಡಿದೆ, ಭಾಷಣ, ಚಳುವಳಿ, ಹೋರಾಟದಲ್ಲೆ ನಮ್ಮ ಶ್ರಮ ಕಳೆದುಕೊಳ್ಳುತ್ತಿದ್ದೇವೆ, ಬೇರೆಯವರು ಇದರ ಲಾಭವನ್ನು ಪಡೆಯುತ್ತಾರೆ. ಯಾರಿಗೆ ಅನ್ಯಾಯವಾಗಿದೆ, ಯಾರಿಗೆ ಬೆಳಕು ಸಿಗುತ್ತಿಲ್ಲ ಅಂತಹವರನ್ನು ಗುರುತಿಸಿ ಕೈಹಿಡಿದು ನಡೆಸಬೇಕು ಆಗ ಮಾತ್ರ ಬಾಬಾ ಸಾಹೇಬರ ಉದ್ದೇಶ ಈಡೇರಿದಂತಾಗುತ್ತದೆ. ನಮ್ಮ ಹೋರಾಟ ಬದಲಾಗಬೇಕು ಸಾಂವಿಧಾನಿಕವಾಗಿ ಆಗಬೇಕು. ವ್ಯರ್ಥವಾಗಿ ಸಮಯ ಹಾಳು ಮಾಡದೆ ಉತ್ತಮ ಶಿಕ್ಷಣ, ಸಂಸ್ಕಾರವನ್ನು ಪಡೆದು ಬದುಕು ಕಟ್ಟಿಕೊಳ್ಳಬೇಕು. ವಿಶ್ವ ಚೇತನ ಟ್ರಸ್ಟ್ ಪ್ರಾರಂಭ ಒಂದು ಸಣ್ಣ ಹೆಜ್ಜೆ, ನಡೆಯಬೇಕಿರುವುದು ಇನ್ನೂ ಬಹಳವಿದೆ. ಗುರಿಸಾಧಿಸಿ ಯಶಸ್ಸು ಕಾಣುವಂತೆ ಹಾರೈಸಿದರು.

ತಾಲ್ಲೂಕು ಗ್ಯಾರೆಂಟಿ ಸಮಿತಿ ಅಧ್ಯಕ್ಷ ಎಚ್.ಪಿ. ಶ್ರೀಧರ್ ಗೌಡ ಮಾತನಾಡಿ, ಸಂಘ,ಸಂಸ್ಥೆಗಳನ್ನು ಕಟ್ಟುವುದು ಸುಲಭ. ಆದರೆ ಮುನ್ನಡೆಸಿಕೊಂಡು ಹೋಗುವುದು ಕಷ್ಟದ ಹಾದಿ. ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು ನೊಂದವರಪರಧ್ವನಿಯಾಗಿಸಂಸ್ಥೆಮುನ್ನಡೆಯುವಂತಾಗಲಿ ಎಂದು ಅವರು ತಿಳಿಸಿದರು.

ಟ್ರಸ್ಟ್ ಅಧ್ಯಕ್ಷ ಎ.ಸಿ.ಕಿರಣ್, ಸಕಲೇಶಪುರ ಶಾಸಕ ಸಿಮೆಂಟ್ ಮಂಜು, ಮುಖಂಡ ಎ.ಟಿ.ಕೃಷ್ಣೇಗೌಡ, ವಾಣಿಜ್ಯ ತೆರಿಗೆ ಇಲಾಖೆ ಸಹಾಯಕ ಆಯುಕ್ತ ಚನ್ನಕೇಶವ, ಚಾಮರಾಜನಗರ ಉಪ ವಿಭಾಗಾಧಿಕಾರಿ ಮಹೇಶ್, ವಕೀಲ ಬಿ.ಸಿ.ರಾಜೇಶ್, ಬಿಎಸ್‌ಪಿ ರಾಜ್ಯ ಕಾರ್ಯದರ್ಶಿ ಅತ್ನಿ ಹರೀಶ್, ಡಾ. ರೇವಣ್ಣ, ಉದ್ಯಮಿ ಕಾಂತರಾಜು, ಪತ್ರಕರ್ತ ಹೆತ್ತೂರು ನಾಗರಾಜ್, ವಿಷ್ಣುಪ್ರಕಾಶ್, ಎಂ.ಸಿ.ರಾಜೇಂದ್ರ ಮಾತನಾಡಿದರು.

ವಿವಿಧ ಕ್ಷೇತ್ರಗಳ ಸಾಧಕರನ್ನು ಗೌರವಿಸಲಾಯಿತು. ತಹಶೀಲ್ದಾರ್ ಕೆ.ಸಿ. ಸೌಮ್ಯ, ತಾಲ್ಲೂಕು ಆರೋಗ್ಯಾಧಿಕಾರಿ ಡಾ ಪುಷ್ಪಲತಾ, ಶಿರಸ್ತೆದಾರ್ ಸಿ. ಸ್ವಾಮಿ, ಸೋಮಶೇಖರ್, ವಕೀಲ ನಾಗರಾಜ್, ಪಪಂ ಮಾಜಿ ಸದಸ್ಯ ಕೃಷ್ಣಯ್ಯ, ದಸಂಸ ಮುಖಂಡ ದುಮ್ಮಿ ಕೃಷ್ಣ, ಟ್ರಸ್ಟ್ ಪದಾಧಿಕಾರಿಗಳಾದ ಲೋಕೇಶ್, ರಂಗಸ್ವಾಮಿ ಇನ್ನಿತರರಿದ್ದರು.

## ಸೈಕಲ್‌ನಲ್ಲಿ ಸುತ್ತಿ ಪಕ್ಷ ಕಟ್ಟಿದ ಮುಲಾಯಂ



• ಪ್ರಜೋದಯ ವರದಿ

**ಬೆಂಗಳೂರು:** ಪ್ರತಿ ಗ್ರಾಮಗಳಿಗೆ ಸೈಕಲ್‌ನಲ್ಲಿ ಪ್ರಚಾರ ಮಾಡಿ ಸಮಾಜವಾದಿ ಪಕ್ಷ ಸಂಘಟಿಸಿದ ಮಹಾನ್ ನಾಯಕ ಮುಲಾಯಂ ಸಿಂಗ್ ಯಾದವ್ ಯುವ ಪೀಳಿಗೆಗೆ ಮಾದರಿಯಾಗಿದ್ದಾರೆಂದು ಯುವ ಜನಾ ಸಭಾ ರಾಜ್ಯ ಪ್ರಧಾನ ಕಾರ್ಯದರ್ಶಿ ಜಯರಾಮ್ ಜೆ.ಸಿ.ರೆಡ್ಡಿ ಅವರು ಹೇಳಿದರು.

ಸಮಾಜವಾದಿ ಪಾರ್ಟಿ ಯುವಜನ ಸಭಾ ಕೇಂದ್ರ ಕಚೇರಿಯಲ್ಲಿ ಆಯೋಜಿಸಿದ್ದ ಉತ್ತರ ಪ್ರದೇಶ ಮಾಜಿ ಮುಖ್ಯಮಂತ್ರಿ ಮುಲಾಯಂ ಸಿಂಗ್ ಯಾದವ್ ಅವರ 86ನೇ ಜನ್ಮ ದಿನಾಚರಣೆಯಲ್ಲಿ ಮಾತನಾಡಿ, 4 ದಶಕಗಳ ಕಾಲ ಇಡೀ ಉತ್ತರ ಪ್ರದೇಶವನ್ನು ಸೈಕಲ್‌ನಲ್ಲಿ ಪ್ರವಾಸ ಮಾಡಿ ಪಕ್ಷ ಸಂಘಟನೆ ಮಾಡಿದ ನಾಯಕ ಅವರಾಗಿದ್ದಾರೆ ಎಂದರು.

ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರ ಜೆಡಿಎಸ್ ಮುಖಂಡ ಮುನಿ ಕುಮಾರ್ ಅವರು ಮಾತನಾಡಿ, ದೇಶದಲ್ಲಿ ಸಮಾಜವಾದಿ ನಾಯಕರಾಗಿ ಅನೇಕ ಯುವ ಜನರಿಗೆ, ಶೋಷಿತರರನ್ನು ಅನ್ಯಾಯದಿಂದ ಹೊರತಂದು, ಸಮಾನತೆಗಾಗಿ ದುಡಿದು ಪಕ್ಷ ಸಂಘಟಿಸಿದ ಸಮಾಜವಾದಿ ನಾಯಕರು ಮುಲಾಯಂ ಸಿಂಗ್ ಎಂದರು.

ಪಕ್ಷದ ರಾಜ್ಯಾಧ್ಯಕ್ಷ ಎನ್.ಮಂಜಪ್ಪ, ರಾಜ್ಯ ಸಂಘಟನಾ ಕಾರ್ಯದರ್ಶಿ ರಂಗನಾಥ್ ಎಲ್. ಪತ್ರೊಟಿ, ರಿಚರ್ಡ್, ಪುಟ್ಟರಾಜು ಯಾದವ್ ಇದ್ದರು.

## 16ನೇ ಸಿಐಟಿಯು ಸಮ್ಮೇಳನದಲ್ಲಿ ನಿರ್ಧಾರ

# ಕರಾಳ ಕಾರ್ಮಿಕ ಸಂಹಿತೆ ವಿರುದ್ಧ ಪ್ರತಿಭಟನೆಗೆ ನಿರ್ಧಾರ

• ಪ್ರಜೋದಯ ವರದಿ

**ಹಾಸನ:** ಕರಾಳ ಕಾರ್ಮಿಕ ಸಂಹಿತೆಗಳು ಮತ್ತು ಶ್ರಮ ಶಕ್ತಿ ನೀತಿ ವಿರುದ್ಧ ತೀವ್ರ ಪ್ರತಿಭಟನೆ ಕೈಗೊಳ್ಳಲು 16ನೇ ಸಿಐಟಿಯು ಸಮ್ಮೇಳನದಲ್ಲಿ ನಿರ್ಧರಿಸಲಾಗಿದೆ ಎಂದು ಸಿಐಟಿಯು ರಾಜ್ಯ ಉಪಾಧ್ಯಕ್ಷ ಧರ್ಮೇಶ್ ಅವರು ತಿಳಿಸಿದರು.



ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ನ.13 ರಿಂದ 15ರವರೆಗೆ ನಡೆದ ಸಮ್ಮೇಳನ ಯಶ್ವಸಿಯಾಗಿದೆ. ಸಮ್ಮೇಳನದಲ್ಲಿ ನೂತನ ರಾಜ್ಯ ಸಮಿತಿ ರಚಿಸಲಾಯಿತು. ಅಧ್ಯಕ್ಷರಾಗಿ ಎಂ.ಎಸ್.ಮೀನಾಕ್ಷಿ ಸುಂದರಂ, ಪ್ರಧಾನ ಕಾರ್ಯದರ್ಶಿಯಾಗಿ ಎಸ್. ವರಲಕ್ಷ್ಮಿ, ರಾಜ್ಯ ಉಪಾಧ್ಯಕ್ಷರಾಗಿ ಧರ್ಮೇಶ್ ಮೊದಲಾದವರನ್ನು ಆಯ್ಕೆ ಮಾಡಲಾಗಿದೆ ಎಂದರು.

ನಾಡಿನ ಸಾಮಾಜಿಕ, ಆರ್ಥಿಕ, ರಾಜಕೀಯ ಪರಿಸ್ಥಿತಿ, ದುಡಿಯುವ ಜನರ ಮುಂದಿನ ಸವಾಲುಗಳ ಬಗ್ಗೆ ಚರ್ಚೆ ನಡೆಯಿತು. ಜೊತೆಗೆ ಕಾರ್ಮಿಕರಿಗೆ ಮಾಸಿಕ 36 ಸಾವಿರ ಕನಿಷ್ಠ ವೇತನ, 10 ಸಾವಿರ ಪಿಂಚಣಿ, ಆರೋಗ್ಯ, ಸೇವಾ ಭದ್ರತೆ, ಗುತ್ತಿಗೆ, ಹೊರಗುತ್ತಿಗೆ, ದಿನಗೂಲಿ ನೌಕರರ ಕಾಯಂ ಸೇರಿದಂತೆ ಹಲವು ನಿರ್ಣಯ ಕೈಗೊಳ್ಳಲಾಯಿತು ಎಂದು ತಿಳಿಸಿದರು.

ಕೇಂದ್ರ ಸರ್ಕಾರ ಶ್ರಮ ಧರ್ಮ ಎಂದು ಹೇಳಿಕೊಂಡು ಶ್ರಮ ಶಕ್ತಿ ನೀತಿ-2025 ಎಂಬ ರಾಷ್ಟ್ರೀಯ ಕಾರ್ಮಿಕ ಮತ್ತು ಉದ್ಯೋಗ ನೀತಿಯ ಕರಡು ನೀತಿಯನ್ನು ಪ್ರಕಟಿಸಿರುವುದು ಆಧುನಿಕ ಗುಲಾಮಗಿರಿ ಹೇರಿಕೆಯಾಗಿದೆ. ಕಾರ್ಮಿಕ ಕಾನೂನು, ಆಡಳಿತ ನಿಯಂತ್ರಣವನ್ನು ಮುಕ್ತಗೊಳಿಸಿ ದುಡಿಯುವ ಜನರ ಹಕ್ಕು ದಮನ ಮಾಡುವುದು ಇದರ ಉದ್ದೇಶ ಎಂದು ಆರೋಪಿಸಿದರು.

ಕಾರ್ಮಿಕ ಸಂಹಿತೆಯಲ್ಲಿ ಮನುಸ್ಮೃತಿ, ಧರ್ಮಶಾಸ್ತ್ರಗಳನ್ನು ಪ್ರಸ್ತಾಪಿಸಲಾಗಿದೆ. ಮತ್ತೊಮ್ಮೆ ಅಸಮಾನತೆಯನ್ನು ಕಾನೂನು ಬದ್ಧಗೊಳಿಸುವ ಮತ್ತು ಕಾರ್ಮಿಕರ ಹಕ್ಕು ಆಧಾರಿತ ವಿಧಾನವನ್ನು ನಿಗ್ರಹಿಸುವ ಕಸರತ್ತು ಇದಾಗಿದೆ. ಭಾರತೀಯ ಸಂವಿಧಾನದ ಮೂಲಭೂತ ಮೌಲ್ಯಗಳಿಗೆ ವ್ಯತಿರಿಕ್ತವಾಗಿರುವ ಕಾರ್ಮಿಕ ಸಂಹಿತೆಗಳನ್ನು ಜಾರಿಗೊಳಿಸಲಾಗುತ್ತಿದೆ. ಕಾರ್ಮಿಕ ಇಲಾಖೆ ತನ್ನೆಲ್ಲ ಅಧಿಕಾರ-ಬಲವನ್ನು ಕಳೆದುಕೊಳ್ಳಲಿದೆ. ಕೇಂದ್ರದ ಈ ಕರಡು ನೀತಿಯನ್ನು ಖಂಡಿಸಿ ನ.26 ರ ಸಂವಿಧಾನ ದಿನದಂದು ಪ್ರತಿಭಟನೆ ನಡೆಸಲಾಗುವುದು ಎಂದರು.

ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಬಿ.ಪುಷ್ಪ ಮಾತನಾಡಿ, ಗ್ರಾಮ ಪಂಚಾಯಿತಿ ನೌಕರರ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ನ.29 ರಂದು ಮೈಸೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮನೆ ಮುಂದೆ ಪ್ರತಿಭಟನೆ ಹಾಗು ಅಂಗನವಾಡಿ ನೌಕರರಿಗೆ ಮಾರಕವಾಗಿರುವ ಎಫ್‌ಆರ್‌ಎಸ್ ಕೈ ಬಿಡುವಂತೆ ಆಗ್ರಹಿಸಿ ಹಾಗು ಬಾಕಿ ವೇತನ ನೀಡಿಕೆಗೆ ಆಗ್ರಹಿಸಿ ಡಿ.1 ರಿಂದ ಕೇಂದ್ರ ಸಚಿವರ ಮನೆ ಮುಂದೆ ಅನಿರ್ದಿಷ್ಟ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದರು.

ಸಿಐಟಿಯು ಜಿಲ್ಲಾ ಖಜಾಂಚಿ ಅರವಿಂದ್, ಮಂಜುಳಾ, ಸೌಮ್ಯ, ಹೊನ್ನೇಗೌಡ ಇದ್ದರು.

## ಶ್ರೀಲಂಕಾದಲ್ಲಿ ನೃತ್ಯೋತ್ಸವ ಯಶಸ್ವಿ



• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಭಾರತದ ನ್ಯಾಷನಲ್ ಕ್ಲಾಸಿಕಲ್ ಡಾನ್ಸ್ ಅಕಾಡೆಮಿ ಮತ್ತು ಶ್ರೀಲಂಕಾದ ಗ್ಲೋಬಲ್ ಫೆಡರೇಶನ್ ವತಿಯಿಂದ ಇತ್ತೀಚೆಗೆ ಶ್ರೀಲಂಕಾದ ರಾಜಮಹಾ ವಿಹಾರ-ಪೆಪಿಲಿಯಾನದಲ್ಲಿ 69ನೇ ಅಂತಾರಾಷ್ಟ್ರೀಯ ನೃತ್ಯೋತ್ಸವ ನೆರವೇರಿತು.

ಕಾರ್ಯಕ್ರಮದ ನೇತೃತ್ವ ವಹಿಸಿದ್ದ ವಿದುಷಿ ಡಾ.ಸ್ವಾತಿ ಪಿ.ಭಾರದ್ವಾಜ್ ಮಾತನಾಡಿ, ದೇಶವಿದೇಶಗಳಲ್ಲಿ ಭಾರತೀಯ ಶಾಸ್ತ್ರೀಯ ನೃತ್ಯದ ಪ್ರಚಾರಕ್ಕಾಗಿ ನೀಡುತ್ತಿರುವ ಕೊಡುಗೆಯನ್ನು ಗುರುತಿಸಿ ಶ್ರೀಲಂಕಾ ವೇದಿಕೆ ಕಲ್ಪಿಸಿರುವುದು ಸಂತೋಷದ ತರಿಸಿದೆ. ಮಕ್ಕಳು ಮತ್ತು ಯುವ ಪೀಳಿಗೆ ಭಾರತೀಯ ಸಂಸ್ಕೃತಿ, ಸಂಸ್ಕಾರಕ್ಕೆ ಒಳಪಡುವ ನೃತ್ಯ ಸಂಗೀತ ಇತ್ಯಾದಿ ಕಲೆಗಳನ್ನು ಮೈಗೂಡಿಸಿಕೊಂಡರೆ ದೇಶದ ಸಂಸ್ಕೃತಿಯನ್ನು ಉಳಿಸುವ ಜೊತೆಗೆ ಮಾದರಿ ಬದುಕು ಕಟ್ಟಿಕೊಳ್ಳಬಹುದೆಂದರು.

ನೃತ್ಯೋತ್ಸವದಲ್ಲಿ ಶಾಲಿನಿ ಹೆಬ್ಬಾರ್ ಹಾಗು ಲಕ್ಷ್ಮಿ ತೇರ್ಡಾಲ್ಮಠ ಅವರ ಶಿಷ್ಯರು ನೃತ್ಯ ಪ್ರದರ್ಶನ ನೀಡಿ ಗಮನ ಸೆಳೆದರು. ಶ್ರೀಲಂಕಾ ಡೈರೆಕ್ಟರ್ ಜನರಲ್ ಹಾಗು ಪೀಸ್ ಅಂಬಾಸಿಡರ್ ಡಾ. ಸರ್ ದೇಶಪ್ರಿಯಾ ಎಸ್. ವಿಜಯತುಂಗ, ಬಿ. ಸರತ್ ಪ್ರೇಮಸಿರಿ ಪೆರೇರಾ, ಹೆಚ್. ಬಿ. ಪ್ರೇಮದಾಸ, ಎಂ.ಡಿ.ಪ್ರೇಮಚಂದ್ರ ಇತರರಿದ್ದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK